# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 51 THURSDAY 30-04-2026 PRGI No : KNKAN/26/A0962 Pages:4 Rs.2.00 M: 9742418836


## ಡಿಕೆಶಿ ವಿರುದ್ಧ ಅಶೋಕ್ ವಾಗ್ದಾಳಿ



ಬೆಂಗಳೂರು: ನಾಲ್ಕು ವೋಟಿಗೋಸ್ಕರ ದೇಶದ್ರೋಹಿಗಳನ್ನು ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವ ಸ್ವಾರ್ಥಿಗಳು ನಾಡಿನ ಸಿಎಂ ಆಗಲು ಹೊರಟಿರುವುದು ಕರ್ನಾಟಕದ ದುರಂತ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ಅಂದು ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟವನ್ನು ಕೇವಲ 'ಡೈವರ್ಶನ್ ಪಾಲಿಟಿಕ್ಸ್' ಎಂದು ಲೇವಡಿ ಮಾಡಿ ಉಗ್ರರ ಪರ ನಿಂತಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ನಾಯಕರಿಗೆ ಈಗ ಸತ್ಯದ ದರ್ಶನವಾಗಿದೆ! ಇಂದು ಮಂಗಳೂರು ಸ್ಫೋಟದ ರೂವಾರಿ ಉಗ್ರ ತಾರೀಕಿಗೆ ನ್ಯಾಯಾಲಯ ಶಿಕ್ಷೆ ವಿಧಿಸಿರುವುದನ್ನ ಉಲ್ಲೇಖಿಸಿ ಹೇಳಿದ್ದಾರೆ.

ಉಗ್ರ ಶಾರೀಕ್‌ನ ಕೃತ್ಯ ಸಾಬೀತಾಗಿದ್ದು, ಎನ್ ಐ ಎ ನ್ಯಾಯಾಲಯ ಆತನಿಗೆ 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ. ರಾಷ್ಟ್ರೀಯ ಭದ್ರತೆಯಂತಹ ಗಂಭೀರ ವಿಚಾರದಲ್ಲೂ ಕೇವಲ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣ ಮಾಡುವ ರಾಜ್ಯ ಕಾಂಗ್ರೆಸ್‌ನದ ನೈಜ ಮುಖವಾಡ ಕಳಚಿದೆ. ಎಂದು ತಿಳಿಸಿದ್ದಾರೆ.

ದೇಶದ ಭದ್ರತೆಗಿಂತ ಕಾಂಗ್ರೆಸ್‌ಗೆ ವೋಟ್ ಬ್ಯಾಂಕ್ ರಾಜಕಾರಣವೇ ಮುಖ್ಯವಾಗಿದೆ. ಕಾಂಗ್ರೆಸ್ ಇನ್ನಾದರೂ ಮತಾಂಧರನ್ನು ತಮ್ಮ ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವುದನ್ನ ಬಿಡಬೇಕು ಎಂದು ಆರ್ ಅಶೋಕ್ ಹೇಳಿದ್ದಾರೆ.

## ಮಲ್ಲಿಕಾರ್ಜುನ ಖರ್ಗೆ ರಾಜ್ಯದ ಮುಖ್ಯಮಂತ್ರಿಯಾದರೆ ಎಲ್ಲರೂ ಸ್ವಾಗತಿಸುತ್ತಾರೆ: ಸಚಿವ ಪರಮೇಶ್ವರ್



ಕಲಬುರಗಿ: ಅನುಭವ ಹೊಂದಿರುವ ಎಐಸಿಸಿ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯದ ಮುಖ್ಯಮಂತ್ರಿಯಾದರೆ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಎಲ್ಲರೂ ಸ್ವಾಗತಿಸುತ್ತಾರೆ ಎಂದು ಗೃಹ ಸಚಿವ ಜಿ ಪರಮೇಶ್ವರ ಬುಧವಾರ ಹೇಳಿದರು.

ಮುಖ್ಯಮಂತ್ರಿ ಬದಲಾವಣೆ ವಿಷಯಕ್ಕೆ ಸಂಬಂಧಿಸಿದಂತೆ ಪಕ್ಷದೊಳಗಿನ ಆಂತರಿಕ ರಾಜಕೀಯ ಮತ್ತು ಗೊಂದಲಗಳ ಮಧ್ಯೆ, ರಾಜ್ಯದ ಜನರಿಗೆ ನೀಡಿದ "ಉತ್ತಮ ಆಡಳಿತ"ದ ಭರವಸೆಯನ್ನು ಈಡೇರಿಸುವುದು ಮುಖ್ಯ ಎಂದು ಅವರು ಪ್ರತಿಪಾದಿಸಿದರು.

ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಗಳ ಫಲಿತಾಂಶಗಳು ಮತ್ತು ಕರ್ನಾಟಕದ ಎರಡು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆಗಳ ಜೊತೆಗೆ, ಮೇ 4 ರ ನಂತರ ನಾಯಕತ್ವ ಬದಲಾವಣೆ ಮತ್ತು ಸಚಿವ ಸಂಪುಟ ಪುನರ್ರಚನೆ ಕುರಿತು ಸಂಭಾವ್ಯ ನಿರ್ಧಾರದ ಬಗ್ಗೆ ಪಕ್ಷ ಮತ್ತು ರಾಜಕೀಯ ವಲಯಗಳಲ್ಲಿ ಹರಿದಾಡುತ್ತಿರುವ ಊಹಾಪೋಹಗಳ ನಡುವೆ ಅವರು ಈ ಹೇಳಿಕೆ ನೀಡಿದ್ದಾರೆ.

"ಅವರು (ಖರ್ಗೆ) ಮುಖ್ಯಮಂತ್ರಿಯಾದರೆ ನಾವು ತುಂಬಾ ಸಂತೋಷಪಡುತ್ತೇವೆ, ಏಕೆಂದರೆ ಅವರು ಸಾಕಷ್ಟು ಅನುಭವ ಹೊಂದಿರುವ ಹಿರಿಯ ರಾಜಕಾರಣಿ. ಅವರು ಮುಖ್ಯಮಂತ್ರಿಯಾದರೆ, ನಾವೆಲ್ಲರೂ ಅದನ್ನು ಸ್ವಾಗತಿಸುತ್ತೇವೆ" ಎಂದು ಖರ್ಗೆ ಸ್ವತಃ ಮುಖ್ಯಮಂತ್ರಿಯಾಗುವ ಬಯಕೆಯನ್ನು ಹೊಂದಿದ್ದಾರೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಪರಮೇಶ್ವರ ಸುದ್ದಿಗಾರರಿಗೆ ತಿಳಿಸಿದರು.

ಇದೇ ವೇಳೆ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಅಥವಾ ಸಚಿವ ಸಂಪುಟ ಪುನಾರಚನೆ ಕುರಿತು ಕಾಂಗ್ರೆಸ್ ಹೈಕಮಾಂಡ್ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಎಲ್ಲಾ ಬೆಳವಣಿಗೆಗಳ ಬಗ್ಗೆ ಹೈಕಮಾಂಡ್‌ಗೆ ಮಾಹಿತಿ ಇದೆ. ಶೀಘ್ರದಲ್ಲೇ ತೀರ್ಮಾನ ಕೈಗೊಳ್ಳಲಾಗುತ್ತದೆ ಮತ್ತು ಅದನ್ನು ಎಲ್ಲರೂ ಪಾಲಿಸಬೇಕಾಗುತ್ತದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬೆಂಬಲಿಗರು ಪದೇ ಪದೇ ದೆಹಲಿಗೆ ಭೇಟಿ ನೀಡುತ್ತಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿ, ಅಭಿವೃದ್ಧಿ ಕೆಲಸಗಳು ಹಾಗೂ ಇಲಾಖೆಗಳಿಗಾಗಿ ಅನುದಾನ ಕೇಳಲು ಕೇಂದ್ರ ಸಚಿವರು ಮತ್ತು ಅಧಿಕಾರಿಗಳನ್ನು ಭೇಟಿ ಮಾಡಲು ಸಚಿವರು ದೆಹಲಿಗೆ ಹೋಗುವುದು ಸಹಜ ಎಂದು ಹೇಳಿದರು.

ಪಕ್ಷದ ಹೈಕಮಾಂಡ್‌ನ್ನು ನಮ್ಮ ನಾಯಕರು ದೇವಾಲಯದಂತೆ ಕಾಣುವ ಕಾರಣ, ದೆಹಲಿ ಭೇಟಿ ವೇಳೆ ಹೈಕಮಾಂಡ್'ನ್ನೂ ಭೇಟಿ ಮಾಡುತ್ತಾರೆ. ಅದರಲ್ಲೇನೂ ವಿಶೇಷವಿಲ್ಲ ಎಂದು ತಿಳಿಸಿದರು.

ರಾಜ್ಯದಲ್ಲಿ ದಲಿತ ಮುಖ್ಯಮಂತ್ರಿ ಕೂಗು ಬಗ್ಗೆ ಮಾತನಾಡಿ, ಅದು ದಲಿತರು ಸೇರಿದಂತೆ ಜನರ ಬಯಕೆಯಾಗಿದ್ದು, ಈ ಕುರಿತು ಯಾವುದೇ ಲಾಬಿ ನಡೆಯುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

ದಲಿತ ಸಚಿವರು ಪದೇಪದೇ ಡಿನ್ನರ್ ಮೀಟಿಂಗ್ ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, "ಹೌದು, ನಾವು ಭೇಟಿ ಆಗುತ್ತೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಭಾಗವಹಿಸಿದ್ದಾರೆ. ಅದರಲ್ಲಿ ತಪ್ಪೇನಿದೆ?" ಎಂದು ಪ್ರಶ್ನಿಸಿದರು.

ಭೋಜನಕೂಟದ ವೇಳೆ ರಾಜಕೀಯ ಸೇರಿ ಹಲವು ವಿಷಯಗಳನ್ನು ಚರ್ಚಿಸುವುದು ಸಹಜ. ಅದರಲ್ಲಿ ಯಾವುದೇ ತಪ್ಪಿಲ್ಲ. ಸಮುದಾಯದ ಯಾವುದೇ ನಾಯಕನನ್ನು ಮುಖ್ಯಮಂತ್ರಿ ಮಾಡಿ ಎಂದು ನಾವು ಹೈಕಮಾಂಡ್‌ಗೆ ಕೇಳಿಲ್ಲ. ಅಂತಿಮ ತೀರ್ಮಾನ ಕಾಂಗ್ರೆಸ್ ಹೈಕಮಾಂಡ್‌ನದ್ದೇ ಎಂದು ತಿಳಿಸಿದರು.

## ಮನಸ್ಸು ನಿಗ್ರಹ ಮಾಡಿದರೆ ಈ ಜಗತ್ತು ಗೆಲ್ಲಬಹುದು: ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ



**ವರದಿ: ಅಡಿವೇಶ ಮುಧೋಳ.**

**ಬೆಳಗಾವಿ ವಾರ್ತೆ ಬೆಟಗೇರಿ:** ಜಗತ್ತಿನಲ್ಲಿ ಯಾವುದು ಶಾಶ್ವತವಲ್ಲ, ನನ್ನದು ಎನ್ನುವುದು ಯಾವುದು ಇಲ್ಲಾ, ಮನಸ್ಸು ನಿಗ್ರಹ ಮಾಡುವವರು ಈ ಜಗತ್ತನ್ನು ಗೆಲ್ಲುತ್ತಾರೆ. ಮನಸ್ಸು ಆ ಕಡೆ, ಈ ಕಡೆ ಹರಿಯದಂತೆ ತಮ್ಮ ಹಿಡಿತದಲ್ಲಿ ಇಟ್ಟುಕೊಳ್ಳಿ ಎಂದು ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಹೇಳಿದರು.

ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮಸ್ಥರ ಸಹಯೋಗದಲ್ಲಿ ಬಸವ ಜಯಂತಿ ಹಾಗೂ 775 ವರ್ಷ ಬಾಳಿದ ಹೊಸಳ್ಳಿ ಮಹಾತಪಸ್ವಿ ಜಗದ್ಗುರು ಬೂದೀಶ್ವರ ಮಹಾಶಿವಯೋಗಿಗಳ ಶಿಲಾ ಮಂಟಪ ಲೋಕಾರ್ಪಣೆ ನಿಮಿತ್ಯ ಬೆಟಗೇರಿ ಗ್ರಾಮದಲ್ಲಿ ಇದೇ ಏ.26ರಿಂದ ಏ.30ರವರೆಗೆ ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಹಮ್ಮಿಕೊಂಡ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ಮೂರನೇಯ ದಿನ ಏ.28ರಂದು ಸ್ಥಳೀಯ ಶ್ರೀ ಗಜಾನನ ವೇದಿಕೆ ಮೇಲೆ ನಡೆದ ಪ್ರವಚನದಲ್ಲಿ ಮಾತನಾಡಿದ ಅವರು, ಮನಸ್ಸು ಹರಿಯುವಾಗ ಭಗವಂತನ ಸ್ಮರಣೆ ಮಾಡಿ, ಮನಸ್ಸು ನಿಗ್ರಹ ಮಾಡಿದರೆ ಮಹಾದೇವನನ್ನಾಗಿಸುತ್ತದೆ ಎಂದರು.

ಒಂದು ಕ್ಷಣದಲ್ಲಿ ಮನಸ್ಸು ಪಾಪ ಮತ್ತು ಪುಣ್ಯ ಮಾಡಲಿಕ್ಕೆ ಹಚ್ಚುತ್ತದೆ. ಮನಸ್ಸಿಗೆ ಸಂಸ್ಕಾರದ ಬಲದಿಂದ ನಿಗ್ರಹ ಮಾಡಬೇಕಾಗಿದೆ. ಹಲವು ಜನ ಮಹಾತ್ಮರು ಹುಚ್ಚರಂತೆ ಕಾಣುತ್ತಾರೆ, ಆದರೆ ಹುಚ್ಚರಲ್ಲಾ, ಜಗತ್ತಿನ ಜನರ ಅಜ್ಞಾನದ ಹುಚ್ಚು ಬಿಡಿಸಲಿಕ್ಕೆ ಅವತರಿಸಿ ಬಂದವರು. ಚಂಚಲ ಮನಸ್ಸು ಸೃಷ್ಠಕರ್ತನನ್ನೇ ಬಿಟ್ಟಿಲ್ಲ. ಮಹಾನ್ ಸಾಧನೆ ಮಾಡಿ ಶಿಖರಕ್ಕೇರಿದವರೆಲ್ಲಾ ಒಂದು ಕ್ಷಣದಲ್ಲಿ ಕೆಳಗೆ ಬಿದ್ದಿದ್ದಾರೆ ಅಂತಾ ಅದ್ಭುತ ಶಕ್ತಿಯುಳ್ಳ ರಾವಣನ ಕ್ಷಣ ಮಾತ್ರದಲ್ಲಿ ಚಂಚಲ ಮನಸ್ಸು ಮಾಡಿ ಕೆಟ್ಟ. ರಾವಣ ಸೇರದಂತೆ ಹಲವಾರು ದೃಷ್ಟಾಂತಗಳನ್ನು ಹೇಳುವುದರ ಮೂಲಕ ಮನಸ್ಸು ಎಂಬ ವಿಷಯದ ಮೇಲೆ ಎಂದು ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಪ್ರವಚನ ಹೇಳಿದರು.

ಸ್ಥಳೀಯ ಪ್ರವಚನ ಕಾರ್ಯಕ್ರಮಕ್ಕೆ ತನು, ಮನ, ಧನ ಸಹಾಯ, ಸಹಕಾರ ನೀಡಿದ ದಾನಿಗಳನ್ನು, ಗಣ್ಯರನ್ನು ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಅವರು ಸತ್ಕರಿಸಿದರು. ಮಲ್ಲಿಕಾರ್ಜುನ ಕೊಡಗನೂರ ಅವರಿಂದ ತಬಲಾ ಸಾಥದೊಂದಿಗೆ ಕಲ್ಲೂರದ ಶಂಕರಯ್ಯ ಗುರುಮಠ ಅವರಿಂದ ಸಂಗೀತ ಸೇವೆ ನಡೆಯಿತು.

ಈಶ್ವರ ಬಳಿಗಾರ, ಶ್ರೀಧರ ದೇಯಣ್ಣವರ, ಬಸವರಾಜ ಪಣದಿ, ಈರಯ್ಯ ಹಿರೇಮಠ, ಸಂಗಯ್ಯ ಹಿರೇಮಠ, ಎಂ.ಐ.ನೀಲಣ್ಣವರ, ದುಂಡಪ್ಪ ಮಾಳೇದ, ಮಲ್ಲಪ್ಪ ಪಣದಿ, ಬಾಳಪ್ಪ ಕನೋಜಿ, ನಿಂಗಪ್ಪ ಕಂಬಿ, ದುಂಡಪ್ಪ ಕಂಬಿ, ಈರಣ್ಣ ಬಳಿಗಾರ, ಈರಪ್ಪ ದೇಯಣ್ಣವರ, ಯಲ್ಲಪ್ಪ ಮೇಳೆಣ್ಣವರ, ಸುರೇಶ ನೀಲಣ್ಣವರ, ಭೀಮನಾಯ್ಕ ನಾಯಕರ, ಭರಮಣ್ಣ ಪೂಜೇರ, ಸೇರಿದಂತೆ ಸ್ಥಳೀಯ ಹಾಗೂ ಸುತ್ತಲಿನ ಹಳ್ಳಿಗಳ ಹರ, ಗುರು, ಚರಮೂರ್ತಿಗಳು, ಸಂತ, ಶರಣರು, ಕೊಪ್ಪಳ ಮತ್ತು ಹೊಸಳ್ಳಿ ಶ್ರೀಗಳ ಪ್ರವಚನ ಆಯೋಜನೆ ಸಮಿತಿ ಪದಾಧಿಕಾರಿಗಳು, ಸದಸ್ಯರು, ಅಪಾರ ಸಂಖ್ಯೆಯಲ್ಲಿ ಭಕ್ತ ಜನ ಸಮೂಹ ಈ ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

**ಕೊಪ್ಪಳ ಶ್ರೀಗಳಿಂದ ಪ್ರವಚನ :** ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದಲ್ಲಿ ಏ.30 ರಂದು ಪ್ರವಚನ ಮಂಗಲ ಕಾರ್ಯಕ್ರಮ, ಮುಂಜಾನೆ 8 ಗಂಟೆಗೆ ಗ್ರಾಮದ ವಿವಿಧ ಬೀದಿಗಳಲ್ಲಿ ಬಳಗಾನೂರದ ಶಿವಶಾಂತವೀರ ಶರಣರಿಂದ ಶಿವಭಜನೆ ಮೂಲಕ ಸದ್ಭಾವನಾ ಪಾದಯಾತ್ರೆ, ಮುಂಜಾನೆ 10 ಗಂಟೆಗೆ ಕೊಪ್ಪಳ ಗವಿಸಿದ್ಧೇಶ್ವರ ಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಅವರ ದಿವ್ಯಸಾನಿಧ್ಯದಲ್ಲಿ ಸ್ಥಳೀಯ ವಿವಿಡಿ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಆಧ್ಯಾತ್ಮಿಕ ಪ್ರವಚನ ಜರುಗಲಿದೆ ಎಂದು ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳ ಪ್ರವಚನ ಆಯೋಜನೆ ಸ್ಥಳೀಯ ಸಮಿತಿ ಪ್ರಕಟನೆಯಲ್ಲಿ ತಿಳಿಸಿದೆ.

## ಮುನ್ಯಾಳ ಸರಕಾರಿ ಪ್ರೌಢ ಶಾಲೆಗೆ ಶೇ.97.08 ರಷ್ಟು ಫಲಿತಾಂಶ







**ಬೆಳಗಾವಿ ವಾರ್ತೆ ಮೂಡಲಗಿ:** ಸಮೀಪದ ಮುನ್ಯಾಳ ಪ್ರೌಢ ಶಾಲೆಯ ವಿದ್ಯಾರ್ಥಿಗಳು 2025–26ರ ಸಾಲಿನ ಎಸ್.ಎಸ್.ಎಲ್.ಸಿ ಪರೀಕೆಯಲ್ಲಿ 97.08 ರಷ್ಟು ಆಗಿದೆ ಎಂದು ಮುಖ್ಯೋಪಾದ್ಯಾಯ ಶಿವನಪ್ಪ ಕುಂದರಗಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ. ಶಾಲೆಗೆ ಮಹೇಶ ನ್ಯಾಮಗೌಡರ ಶೇ.94.04 ಪ್ರಥಮ, ಲಕ್ಕವ್ವ ಯಾದವಾಡ ಶೇ.92.88 ದ್ವಿತೀಯ, ಶ ಸುಕನ್ಯಾ ಸಂತಿ ಶೇ.92.08 ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ. ಅತ್ಯುನ್ನತ ಶ್ರೇಣಿಯಲ್ಲಿ 8, ಪ್ರಥಮ ಶ್ರೇಣಿಯಲ್ಲಿ 16, ದ್ವಿತೀಯ ಶ್ರೇಣಿಯಲ್ಲಿ 14 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು,

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಎಸ್.ಡಿ.ಎಂ.ಸಿ ಪದಾಧಿಕಾರಿಗಳು, ಸದಸ್ಯರು ಮತ್ತು ಕಳೆದ ಎರಡು ವರ್ಷಗಳಿಂದ ಶಾಲೆಯ ಎಲ್ಲ ವಿದ್ಯಾರ್ಥಿಗಳಿಗೆ ವರ್ಷವಿಡಿ ಉದಯವಾಣಿ ಶಿಕ್ಷಣ ಮಾರ್ಗದರ್ಶಿ ಪ್ರತಿಕೆಯನ್ನು ಪ್ರಾಯೋಜಕತ್ವ ವಹಿಸಿ ವಿದ್ಯಾರ್ಥಿಳಿಗೆ ಪ್ರತಿಕೆಯನ್ನು ನೀಡಿರುವ ತಮ್ಮಣ್ಣ ಬಿ.ಕೆಂಚರಡ್ಡಿ, ಶಿಕ್ಷಣ ಪ್ರೇಮಿಗಳು, ಮುಖ್ಯೋಪಾಧ್ಯಾಯ ಶಿವನಪ್ಪ ಕುಂದರಗಿ, ಉಪನ್ಯಾಸಕರು, ಸಿಬ್ಬಂದಿ ವರ್ಗದವರು, ಪಾಲಕರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.



**ಬೆಳಗಾವಿ ವಾರ್ತೆ ಗೋಕಾಕ:** ನಗರದ ಶ್ರೀ ಚನ್ನಬಸವೇಶ್ವರ ವಿದ್ಯಾಪೀಠದ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಅನುರಾದಾ ಕುರಿ, ವಿನೋಧ ಸನದಿ, ನಿವೇದಿತಾ ಅಡಿಬಟ್ಟಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ನಿಮಿತ್ತ ಸಂಸ್ಥೆಯ ಅಧ್ಯಕ್ಷ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಮಂಗಳವಾರದಂದು ಸತ್ಕರಿಸಿ, ಗೌರವಿಸಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿಯ ಶಂರಕ ಗೋರೋಶಿ, ಮಲ್ಲಿಕಾರ್ಜುನ ಈಟಿ, ವಿವೇಕ ಜತ್ತಿ, ಆಡಳಿತಾಧಿಕಾರಿ ಅಡಿವೇಶ ಗವಿಮಠ, ಮುಖ್ಯೋಪಾಧ್ಯಾಯ ಎಸ್. ಕೆ.ಮಠದ ಇದ್ದರು.

## ಸಚಿವೆ ಹೆಬ್ಬಾಳ್ಕರ್ ಕ್ಷೇತ್ರದಲ್ಲೇ ಕುಟುಂಬಕ್ಕೆ ಸಾಮಾಜಿಕ ಬಹಿಷ್ಕಾರ.!





**ಬೆಳಗಾವಿ ವಾರ್ತೆ ಬೆಳಗಾವಿ:** ಮಹಿಳೆ ಮತ್ತು ಮಕ್ಕಳ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಕ್ಷೇತ್ರದಲ್ಲೇ ಕುಟುಂಬಕ್ಕೆ ಸಾಮಾಜಿಕ ಬಹಿಷ್ಕಾರ ಹಾಕಿರುವ ಘಟನೆ ಬೆಳಕಿಗೆ ಬಂದಿದೆ.

ಹೌದು..ಗ್ರಾಮೀಣ ಕ್ಷೇತ್ರವಾದ ಕೊಂಡಸಕೊಪ್ಪ ಗ್ರಾಮದ ಕುರುಬ ಸಮಾಜದ ಕುಟುಂಬವೊಂದರ ಮೇಲೆ ಅದೇ ಸಮಾಜದವರು ಸಾಮಾಜಿಕ ಬಹಿಷ್ಕಾರ ಹೇರಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಅಷ್ಟೇ ಅಲ್ಲದೇ ಆ ಕುಟುಂಬದ ಜೊತೆ ಮಾತಾಡಿದವರಿಗೆ 5000 ದಂಡ ಹಾಗೂ ಮಾತಾಡಿದವರ ಬಗ್ಗೆ ಮಾಹಿತಿ ಕೊಟ್ಟವರಿಗೆ 1000 ರೂಪಾಯಿ ಬಹುಮಾನ ಕೂಡ ಘೋಷಣೆ ಮಾಡಿದ್ದಾರೆ.

ಕೊಂಡುಸಕೊಪ್ಪ ಗ್ರಾಮದ ಕೆಲ ಪಂಚರು ದೇವಸ್ಥಾನ ಪೂಜೆ ಹಾಗೂ ಪ್ರೀತಿ ವಿಚಾರಕ್ಕೆ ಸಂಬಂಧಿಸಿದಂತೆ ಈ ಕ್ರಮ ಕೈಗೊಂಡಿದ್ದಾರೆ. ಕುಟುಂಬದವರೊಂದಿಗೆ ಮಾತನಾಡಿದರೆ 5000 ರೂ. ದಂಡ ವಿಧಿಸುವುದಾಗಿ ಹಾಗೂ ಮಾಹಿತಿ ನೀಡಿದವರಿಗೆ 1000 ರೂ. ಬಹುಮಾನ ಘೋಷಿಸಿದ್ದಾರೆ ಎನ್ನುವ ಆಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿವೆ.

ಸಹೋದರ ಸಂಬಂಧಿಗಳೇ ಬಹಿಷ್ಕಾರ: ಗ್ರಾಮದ ಬೀರದೇವರ ಪೂಜಾರಿ ಆಗಿದ್ದ ನರಸೋಬಾ ಸಾಂಬ್ರೇಕರ್ ಕುಟುಂಬಕ್ಕೆ ಸಹೋದರ ಸಂಬಂಧಿಗಳೇ ಬಹಿಷ್ಕಾರ ಹಾಕಿದ್ದಾರೆ ಎನ್ನಲಾಗ್ತಿದೆ. ಜೊತೆಗೆ ದೇವಾಲಯದ ಪೂಜೆ ವಿಚಾರದಲ್ಲಿ ಪಂಚ ಕಮಿಟಿ ಜೊತೆಗೆ ಭಿನ್ನಾಭಿಪ್ರಾಯ ಮೂಡಿತ್ತು. ದೇವಾಲಯದ ಪೂಜಾರಿ ಹೇಳುವ ಭವಿಷ್ಯಕ್ಕೆ ನರಸೋಬಾ ವಿರೋಧ ವ್ಯಕ್ತಪಡಿಸಿದ್ದರಂತೆ ಈ ಎರಡು ಕಾರಣ ಮುಂದಿಟ್ಟುಕೊಂಡು ಪಂಚ ಕಮಿಟಿಯಿಂದ ನರಸೋಬ ಕುಟುಂಬಕ್ಕೆ ಬಹಿಷ್ಕಾರದ ಶಿಕ್ಷೆ ಕೊಟ್ಟಿದ್ದಾರೆ ಎನ್ನುವ ಆರೋಪವಿದೆ.

ಕುಟುಂಬದ ಮನೆ ಮೇಲೆ ಕಲ್ಲು ತೂರಾಟ: ಬಹಿಷ್ಕಾರ ಮಾಡಿದ ಕುಟಂಬದ ಮನೆ ಮೇಲೆ ರಾತ್ರಿಯಾದ್ರೆ ಸಾಕು ಕಲ್ಲುಗಳು ಬೀಳ್ತಿವೆಯಂತೆ. ಊರಲ್ಲಿ ಯಾರು ಮಾತಾಡ್ತಿಲ್ಲ ಮದುವೆ, ಕಾರ್ಯಕ್ರಮಗಳಿಗೆ ಆಹ್ವಾನ ನೀಡ್ತಿಲ್ಲ. ಐದು ವರ್ಷದ ಮಗುವನ್ನ ಕೂಡ ಜನರು ದೂರ ಇಟ್ಟಿದ್ದಾರೆ. ಈ ಸಂಬಂಧ ಪೊಲೀಸರಿಗೆ ದೂರು ನೀಡಲಾಗಿದೆ. ಶೀಘ್ರವೇ ಸಚಿವೆ ಹೆಬ್ಬಾಳಕರ ಅವರು ಅಮಾನವೀಯ ನಿರ್ಧಾರ ತೆಗೆದುಕೊಂಡಿರುವ ಪಂಚರ ವಿರುದ್ಧ ಕ್ರಮ ಕಯಗೊಂಡು ನೊಂದ ಕುಟುಂಬ ಎಂದಿನಂತೆ ಸಾಮಾಜಿಕ ಬೆರೆತು ಬಾಳುವೆ ಮಾಡುವ ವಾತಾವರಣ ನಿರ್ಮಿಸಬೇಕು ಎಂದು ನೊಂದ ಕುಟುಂಬ ಒತ್ತಾಯಿಸಿದೆ.

# ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹುಬ್ಬಳ್ಳಿ ರೈಲ್ವೆ ನಿಲ್ದಾಣ ಕ್ಕೆ ನಗರ ಸಾರಿಗೆ ಬಸ್ ಪ್ರಾಯೋಗಿಕ ಆರಂಭ

**ಬೆಳಗಾವಿ ವಾರ್ತೆ ಗದಗ:** ಸಾರ್ವಜನಿಕ ಪ್ರಯಾಣಿಕರ ಬೇಡಿಕೆಯ ಮೇರೆಗೆ, ಪ್ರಯಾಣಿಕರ ಅನುಕೂಲತೆ ಹಾಗೂ ವಿಮಾನ ನಿಲ್ದಾಣ ಮತ್ತು ರೈಲ್ವೆ ನಿಲ್ದಾಣಗಳ ನಡುವಿನ ಸಂಪರ್ಕವನ್ನು ಸುಗ ಮಗೊಳಿಸುವ ಉದ್ದೇಶದಿಂದ ಎಪ್ರಿಲ್ 28 ರಿಂದ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹುಬ್ಬಳ್ಳಿ ರೈಲ್ವೆ ನಿಲ್ದಾಣದವರೆಗೆ ಪ್ರಾಯೋಗಿಕವಾಗಿ ನೂತನ ಬಸ್ ಸಾರಿಗೆ ಸೌಲಭ್ಯವನ್ನು ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗಾ ಎಂ. ಹಾಗೂ ಹುಬ್ಬಳ್ಳಿ ವಿಮಾನ ನಿಲ್ದಾಣದ ನಿರ್ದೇಶಕರಾದ ರೂಪೇಶ್ ಕುಮಾರ್ ರವರು ಬಸ್ ಗೆ ಚಾಲನೆಯನ್ನು ನೀಡಿದರು.

ಪ್ರಾಯೋಗಿಕವಾಗಿ ನೂತನ ಸಾರಿಗೆ ಸೇವೆಯನ್ನು ಉದ್ದೇಶಿಸಿ ವ್ಯವಸ್ಥಾಪಕ ನಿರ್ದೇಶಕರವರು ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹುಬ್ಬಳ್ಳಿ ರೈಲ್ವೆ ನಿಲ್ದಾಣದವರೆಗೂ ಆರಂಭಗೊಂಡ ಸಾರಿಗೆ ಸೇವೆಗಳನ್ನು ಸಾರ್ವಜನಿಕ ಪ್ರಯಾಣಿಕರು ಇದರ ಸದಪಯೋಗ ಪಡೆದುಕೊಳ್ಳುವಂತೆ ಹೇಳಿದರು.

ಈ ಸಾರಿಗೆ ವ್ಯವಸ್ಥೆಯನ್ನು ವಿಮಾನಗಳ ಆಗಮನದ ವೇಳಗೆ ಅನುಗುಣವಾಗಿ ಕಾರ್ಯಾ ಚರಣೆಗೊಳಿಸಲಾಗಿತ್ತಿದ್ದು, ಪ್ರತಿದಿನ ಬೆಳಗ್ಗೆ 8:05, 11:45, ಸಂಜೆ 17:05, 18:35, ಹಾಗೂ ರಾತ್ರಿ 19:10, 20:05 ಮತ್ತು 20:50 ಗಂಟೆಗಳಿಗೆ ಬಸ್ ಸಂಚಾರ ಇರಲಿದೆ. ಈ ಬಸ್ಸು ಗೋಕುಲ್ ರಸ್ತೆಯ ಕೇಂದ್ರೀಯ ಬಸ್ ನಿಲ್ದಾಣ, ಹೊಸೂರ್ ಕ್ರಾಸ್, ಹಾಗೂ ನಗರ ಮತ್ತು ಉಪನಗರ ಬಸ್ ನಿಲ್ದಾಣ ಚನ್ನಮ್ಮ ಸರ್ಕಲ್ ಮಾರ್ಗವಾಗಿ ರೈಲ್ವೆ ನಿಲ್ದಾಣವನ್ನು ತಲುಪುತ್ತದೆ ಈ ನೂತನ ಸಾರಿಗೆ ಸೇವೆ ವಿಮಾನ ನಿಲ್ದಾಣದಿಂದ ರೈಲ್ವೆ ನಿಲ್ದಾಣಕ್ಕೆ ಪ್ರಯಾಣಿಸುವ ಪ್ರಯಾಣಿಕರಿಗೆ ಅನುಕೂಲವಾಗಲಿದ್ದು, ನಗರ ಸಾರಿಗೆ ಸಂಪರ್ಕ ಇನ್ನಷ್ಟು ಬಲಪಡಿಸುವ ಉದ್ದೇಶ ಹೊಂದಲಾಗಿದೆ.

ಕಾರ್ಯಕ್ರಮದಲ್ಲಿ ನಗರ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಎಂ. ಸಿದ್ದಲಿಂಗೇಶ, ಪ್ರತಾಪ ಬಿ. ವ್ಹಿ., ಅರುಣ ಡಿ. ಎ., ವಿಭಾಗೀಯ ಸಾರಿಗೆ ಅಧಿಕಾರಿಗಳಾದ ಎಸ್.ಆರ್.ಮಾಟೋಳಿ, ವಿಭಾಗೀಯ ತಾಂತ್ರಿಕ ಶಿಲ್ಪಿ ಪ್ರವೀಣ ಈಡೂರ, ಹುಬ್ಬಳ್ಳಿ ನಗರ ಸಾರಿಗೆ ಘಟಕ ವ್ಯವಸ್ಥಾಪಕರಾದ ವಿನಾಯಕ ಸಾಲಿಮಠ, ಸಂಸ್ಥೆಯ ಅಧಿಕಾರಿಗಳು ಹಾಗೂ ವಿಮಾನ ನಿಲ್ದಾಣದ ಅಧಿಕಾರಿಗಳು ಉಪಸ್ಥಿತರಿದ್ದರು. ಸಾರಿಗೆ ಸೇವೆಯ ಸದುಪಯೋಗವನ್ನು ಸಾರ್ವಜನಿಕ ಪ್ರಯಾಣಿಕರು ಪಡೆದುಕೊಳ್ಳಬೇಕೆಂದು ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.



**ಬೆಳಗಾವಿ ವಾರ್ತೆ ಗೋಕಾಕ:** ಭಾರತೀಯ ಜನತಾ ಪಾರ್ಟಿ ಗೋಕಾಕ ಮಂಡಳ ವತಿಯಿಂದ ನಾರಿ ಶಕ್ತಿ ವಂದನಾ ಅಧಿನಿಯಮವನ್ನು ಜಾರಿಯಾಗದಂತೆ ತಡೆದ ಮಹಿಳಾ ವಿರೋಧಿ ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳ ವಿರುದ್ಧ ಮಹಿಳಾ ಮೋರ್ಚಾ ಪದಾಧಿಕಾರಿಗಳು ಮಂಗಳವಾರದಂದು ನಗರದ ಬಸವೇಶ್ವರ ವೃತ್ತದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ನಗರ ಯುವಮೋರ್ಚಾ ಅಧ್ಯಕ್ಷ ಈರಣ್ಣ ಅಂಬಲಿ, ಭಾರತಿ ಅಂಗಡಿ, ಗೀತಾ ಜರತಾರಕರ, ರಾಜೇಶ್ವರಿ ವಡೆಯರ, ರಾಮೇಶ್ವರಿ ಬಸ್ಸಾಪೂರೆ, ಕುಸುಮಾ ಖನಗಾವಿ, ಶೋಭಾ ಬಂಡಾರಿ,ಶೈಲಾ ಕುಂಬಾರ, ವಿಜಯಲಕ್ಷ್ಮಿ , ರೇಖಾ, ಶಿವಲಿಲಾ , ಜಯಾನಂದ ಹುಣ್ಣಿಬ್ಯಾಳ, ಕಿರಣ ಢಮಾಮಗರ

# ಮೀಸಲಾತಿ, ಭೂ ಸುಧಾರಣೆಗಳು ಸಾಮಾಜಿಕ ನ್ಯಾಯದ ಎರಡು ಪರಿಕಲ್ಪನೆಗಳು: ಪ್ರೊ ;ಬಸವರಾಜ ಜಾಲವಾದಿ

**ಬೆಳಗಾವಿ ವಾರ್ತೆ ಕೊಲ್ಹಾರ:** ಅಂಬೇಡ್ಕರರ ಆರಂಭದ ದಿನಗಳಲ್ಲಿ ಅವರೆಲ್ಲಾ ಹೋರಾಟವು ಹಿಂದುಳಿದ ವರ್ಗದವರಿಗೆ ಮೀಸಲಾಗಿತ್ತು ಏಕೆಂದರೆ ಭೂ ಸುಧಾರಣೆ ಮತ್ತು ಮೀಸಲಾತಿ ಸಾಮಾಜಿಕ ನ್ಯಾಯದ ಎರಡು ಪರಿಕಲ್ಪನೆಗಳು ಎಂಬುವುದು ಅಂಬೇಡ್ಕರ್ ಅವರಿಗೆ ಚೆನ್ನಾಗಿ ಗೊತ್ತಿತ್ತು ಎಂದು ವಿಜಯಪುರದ ಪ್ರಗತಿಪರ ಚಿಂತಕ ಪ್ರೊ??.ಪಿ.ಬಸವರಾಜ ಜಾಲವಾದಿ ಹೇಳಿದರು.

ಅವರು ನಿನ್ನೆ ಕೊಲ್ಹಾರ ತಾಲೂಕಿನ ಮಸೂತಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ , ಮತ್ತು ಭಾರತರತ್ನ ಡಾಪಿ ಬಿ ಆರ್ ಅಂಬೇಡ್ಕರ್ ವಿದ್ಯಾಚೇತನ ಯುವಕ ಸಂಘ ಮಸೂತಿ ಇವರ ಸಹಯೋಗದಲ್ಲಿ ನಡೆದ ಭಾರತರತ್ನ ಡಾಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135 ನೇ ಜಯಂತೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡುತ್ತಿದ್ದರು.

ಮಾತು ಮುಂದುವರಿಸಿದ ಅವರು ಮೀಸಲಾತಿಗೆ ಮೂಲವಾಗಿರುವ 340ನೇ ಕಲಮನ್ನು ಸಂವಿಧಾನದಲ್ಲಿ ಸೇರ್ಪಡೆ ಮಾಡುವುದರ ಮೂಲಕ ವಿಶೇಷವಾಗಿ ಬಿ.ಪಿ ಮಂಡಲ ಆಯೋಗದ ಮೂಲಕ ಒಭಭಿಗಳಿಗೆ ಮೀಸಲಾತಿ ದೊರಕುವಂತೆ ಮಾಡಿದವರು. ಅಂಬೇಡ್ಕರ್ ಈ ಮೊದಲು ಕಾಕಸಾಹೇಬ್ ಕಾಲೇಲ್ಕರ್ ಆಯೋಗ ರಚನೆಗೆ ಮೂಲ ಕಾ ರ ಣೀ ಕ ತ ರ್ ರಾ ಅಂಬೇಡ್ಕರರೆಂಬುದನ್ನು ಓಬಿಸಿ ಜನಾಂಗದವರು ಎಂದೂ ಮರೆಯಬಾರದು. ಹಾಗೂ ಯಾವ ಬಿ.ಪಿ ಮಂಡಲ ಆಯೋಗದಿಂದ ಇಡೀ ಒಬಿಸಿ ಜನಾಂಗಕ್ಕೆ ಮೀಸಲಾತಿ ದೊರಕುವುದಿತ್ತೋ ಪ್ರಜ್ಞೆ ಇಲ್ಲದೆ ಅದನ್ನು ವಿರೋಧಿಸಿದವರು ಇದೇ ಓಬಿಸಿಗಳು.ಅದರೆ ಅದರ ಪರ ನಿಂತು ಬಿಪಿ ಮಂಡಲ್ ಆಯೋಗದ ಮೂಲಕ ಓಬಿಸಿ ಗಳಿಗೆ ಮೀಸಲಾತಿ ಕೊಡಬೇಕೆಂದು ಗಟ್ಟಿಯಾಗಿ ನಿಂತವರು ದಲಿತರು. ಹಿಂದುಳಿದವರು ಅದನ್ನು ವಿರೋಧಿಸಿ ಭಾರತದಾದ್ಯಂತ ಅದರಲ್ಲೂ ವಿಶೇಷವಾಗಿ ಉತ್ತರ ಪ್ರದೇಶ ಮಧ್ಯಪ್ರದೇಶದಲ್ಲಿ ಹೋರಾಟ ಮಾಡಿದ ಉದಾಹರಣೆ ಇದೆ.

ಮಸೂತಿಯ ಕೆ. ಬಿ. ಎಲ್ .ಪಿ .ಎಸ್ .ನ ಜನತಾ ಕಾಲೋನಿಯ ಶಿಕ್ಷಕ ಶಂಕರ್ ಹೆಚ್. ಬರಗಿ ಮಾತನಾಡಿ, ಜಾತೀಯ ಕಾರಣದಿಂದ ಮಾತ್ರ ಅಂಬೇಡ್ಕರರನ್ನು ಹೊರಗಿಟ್ಟ ನಮ್ಮ ಓಬಿಸಿ ಸಮಾಜ ಇಂದು ಪಶ್ಚಾತಾಪ ಪಡುತ್ತಿದೆ. ಮುಂದಿನ ದಿನಮಾನಗಳಲ್ಲಿ ಅಂಬೇಡ್ಕರರ ಜಯಂತಿಯನ್ನು ಊರ ಗಣ್ಯರ ಸಮ್ಮುಖದಲ್ಲಿ ಆಚರಿಸುವ ಮೂಲಕ ಅವರ ಮನುಷ್ಯಪರ ಕಾಳಜಿಯನ್ನ ಇಡೀ ದೇಶಕ್ಕೆ ಮುಟ್ಟಿಸುವುದು ನಮ್ಮ ಜವಾಬ್ದಾರಿಯಾಗಬೇಕು ಎಂದರು.

ಅಸಿಸ್ಟೆಂಟ್ ಸಬ್ ಇನ್ಸೆಕ್ಟರ್ ಕೆ. ಎಸ್. ಐ. ಎಸ್ .ಎಫ್ ಜೋಗ್ ನ ಅನಿಲ್ ಕುಮಾರ್ ದೊಡಮನಿ ಮಾತನಾಡಿ,

ಇವತ್ತಿಗೂ ಅಸ್ಪ್ರಶ್ಯತೆ ತಾಂಡವ ವಾಡುತ್ತಿರುವುದನ್ನು ನೋಡಿದರೆ ಭಾರತೀಯ ಮೇಲ್ವರ್ಗದ ಮನಸ್ಸುಗಳು ಮನುಷ್ಯರನ್ನು ಹಾಗೂ ದೇಶವನ್ನು ಕಡೆಗಣಿಸಿದ್ದಾರೆ ಎಂಬುದು ಸಾಬೀತಾಗುತ್ತದೆ. ಅಂಬೇಡ್ಕರ್ ಅವರ ವಿಚಾರಧಾರೆಗಳೆಲ್ಲ ತಳ ಸಮುದಾಯದ ಹಿಂದುಳಿದ, ದಲಿತ ,ಮಹಿಳೆ ಹಾಗೂ ಕಾರ್ಮಿಕರ ಪರವಾಗಿಯೇ ಇದ್ದವು ಎಂದರು.

ವೇದಿಕೆಯ ಮೇಲೆ ಸಂತೋಷ ಗಣಾಚಾರಿ, ಎಚ್.ಎಸ್ ಘರಸಂಗಿ, ಶಂಕರ್ ಬರಗಿ ಎಸ್ ಕೆ .ಹಂಗರಗಿ, ಸಂತೋಷ ಚನಗೊಂಡ,

ಬಿ.ಜಿ.ಬಿಸ್ಟಗೊಂಡ, ಈರಣ್ಣ ತಳವಾರ, ರಾಜು ಬೆಸ್ಟಗೊಂಡ, ಚಂದಪ್ಪ ತಳವಾರ್, ಸಿಪಿ ಪಾಟೀಲ, ಬಿ.ಎ ಪಾಟಿಲ, ಪ್ರಕಾಶ್ ಕಾಗಲ, ಪ್ರಕಾಶ್ ಘರಸಂಗಿ, ಬಸವರಾಜ



ಸಾಲಹಳ್ಳಿ ಯಮನಪ್ಪ ತಳವಾರ,ಶ್ರೀಶೈಲ್ ಚಿಮ್ಮಲಗಿ, ಮಲ್ಲು ದಳವಾಯಿ, ಶ್ರೀಶೈಲ್ ಡೆಂಗಿ, ಎಸ್ ಎಸ್ ಗೌರಿಮಠ, ಯಲ್ಲಪ್ಪ ಛಲವಾದಿ, ಬಸವರಾಜ ಚಲವಾದಿ, ರಾಜು ದೊಡ್ಡಮನಿ ಸುನಿಲ್ ಹಾಗೂ ವಿದ್ಯಾಚೇತನ ಯುವಕ ಸಂಘದ ಯುವಕರು ಪದಾಧಿಕಾರಿಗಳು ಮುಂತಾದವರು ಹಾಜರಿದ್ದರು.

ಆರಂಭದಲ್ಲಿ ಸಂವಿಧಾನದ ಪೀಠಿಕೆಯನ್ನು ಓದುವುದರ ಮೂಲಕ ಕಾರ್ಯಕ್ರಮದ ಉದ್ಘಾಟನೆ ಆಯಿತು ಕಾರ್ಯಕ್ರಮದಲ್ಲಿ ಕ್ರಾಂತಿಗೀತೆಯ ಮೂಲಕ ಸ್ವಾಗತಿಸಲಾಯಿತು, ಶ್ರೀ ನವೀನ್ ಸಾಲಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ವಕೀಲ ಅನಿಲಕುಮಾರ ವಂದನಾರ್ಪಣೆ ಮಾಡಿದರು.


# ಹಸ್ತಪ್ರತಿ ದಾಖಲೆಗಳ ಸಮೀಕ್ಷೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಭಾರತ ಸರ್ಕಾರದ ಕೇಂದ್ರ ಸಂಸ್ಕೃತಿ ಮಂತ್ರಾಲಯದ ವತಿಯಿಂದ ಜ್ಞಾನ ಭಾರತಮ್ ಮಿಷನ್ ಯೋಜನೆಯಡಿ ದೇಶದಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ಯಗಳು, ಹಸ್ತಪ್ರತಿಗಳು ಹಾಗೂ ದಾಖಲೆಗಳ ಸಮಗ್ರ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಇವುಗಳನ್ನು ಇಂದಿನ ತಂತ್ರಜ್ಞಾನ ಬಳಸಿ ಶಾಶ್ವತವಾಗಿ ಸಂರಕ್ಷಿಸುವ ಉದ್ದೇಶದಿಂದ ಹಸ್ತಪ್ರತಿಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುದಾನ ಹಾಗೂ ಪ್ರಕಟಣೆ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಾಗುತ್ತಿದ್ದು, ಭವಿಷ್ಯದ ಪೀಳಿಗೆಗೆ ಜ್ಞಾನಸಂಪತ್ತನ್ನು ಉಳಿಸಿ ಬಳಸಿಕೊಳ್ಳುವ ಅವಕಾಶ ಕಲ್ಪಿಸಲಾಗುತ್ತಿದೆ. ಈ ಮಹತ್ವದ ಜ್ಞಾನ ಭಾರತ ಮಿಷನ್ ಯೋಜನೆಯನ್ನು ರಾಜ್ಯದಲ್ಲಿಯೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರದಿಂದ ನಿರ್ದೇಶನ ನೀಡಲಾಗಿದೆ. ಇದರ ಭಾಗವಾಗಿ ಹಸ್ತಪ್ರತಿಗಳ ಸಮಗ್ರ ಸರ್ವೆ ಕಾರ್ಯವನ್ನು ಯಶಸ್ವಿಯಾಗಿ ಕೈಗೊಳ್ಳುವ ಉದ್ದೇಶ ಹೊಂದಲಾಗಿದೆ. ಈ ಹಿನ್ನಲೆಯಲ್ಲಿ ಬಾಗಲಕೋಟೆ ಜಿಲ್ಲೆಯ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಲ ಬಳಿ ಹಸ್ತಪ್ರತಿಗಳ ಸಂಗ್ರಹವಿದ್ದಲ್ಲಿ, ಉಪನಿರ್ದೇಶಕರು ಪ್ರವಾಸೋದ್ಯಮ ಇಲಾಖೆ, ಕೊಠಡಿ ಸಂ.137, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಕಚೇರಿಗೆ ಅಥವಾ ದೂರವಾಣಿ ಸಂ.7829538950, 7338628536ಗೆ ಮಾಹಿತಿ ನೀಡುವಂತೆ ಉಪ ನಿರ್ದೇಶಕರಾದ ಜಿ.ಎಸ್.ಹಿತ್ತಲಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗದಲ್ಲಿ ಕೈಮಗ್ಗ ತಂತ್ರಜ್ಞಾನಕ್ಕೆ ಹೊಸ ಬೆಳಕು–ಯುವಕರ ಭವಿಷ್ಯ ರೂಪಿಸುತ್ತಿರುವ ಪ್ರತಿಷ್ಠಿತ ಸಂಸ್ಥೆ

# ಗದಗದ ಹೆಮ್ಮೆ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ



"ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ ಇದು ಗ್ರಾಮೀಣ ಹಾಗೂ ನಗರ ಭಾಗದ ಯುವಕರಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನ ಕ್ಷೇತ್ರದಲ್ಲಿ ಉತ್ತಮ ತಾಂತ್ರಿಕ ಶಿಕ್ಷಣ ನೀಡುವ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿದೆ. ಪಾರಂಪರಿಕ ಕೈಮಗ್ಗ ಕಲೆ ಮತ್ತು ಆಧುನಿಕ ತಂತ್ರಜ್ಞಾನವನ್ನು ಸಂಯೋಜಿಸಿ ವಿದ್ಯಾರ್ಥಿಗಳನ್ನು ಉದ್ಯೋಗಮುಖಿ ಹಾಗೂ ಸ್ವಾವಲಂಬಿ ವ್ಯಕ್ತಿಗಳಾಗಿ ರೂಪಿಸುವುದು ನಮ್ಮ ಪ್ರಮುಖ ಧ್ಯೇಯವಾಗಿದೆ. ಸಂಸ್ಥೆಯಲ್ಲಿ ಲಭ್ಯವಿರುವ ಆಧುನಿಕ ಪ್ರಯೋಗಾಲಯಗಳು, ಅನುಭವೀ ಬೋಧಕರು ಹಾಗೂ ಶಿಷ್ಯವೇತನ ಸೌಲಭ್ಯಗಳು ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ನೆರವಾಗುತ್ತಿವೆ. ಕೈಮಗ್ಗ ಕ್ಷೇತ್ರದಲ್ಲಿ ಆಸಕ್ತಿ ಹೊಂದಿದ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು,"

**–ಶ್ರೀಮತಿ ಸುಮಲತಾ ಎಸ್,**
**ಪ್ರಾಚಾರ್ಯರು,**

**ಗದಗ:** ಪಾರಂಪರಿಕ ಕೈಮಗ್ಗ ಕಲೆಗೂ ಆಧುನಿಕ ತಂತ್ರಜ್ಞಾನಕ್ಕೂ ಸೇತುವೆಯಾ ಗಿರುವ ಗದಗ–ಬೆಟಗೇರಿ ನರಸಾಪೂರ ಗ್ರಾಮದಲ್ಲಿನ ಕರ್ನಾಟಕ ಕೈಮಗ್ಗ ತಂತ್ರ ಜ್ಞಾನ ಸಂಸ್ಥೆ ಇಂದು ರಾಜ್ಯದ ಪ್ರಮುಖ ಶೈಕ್ಷಣಿಕ ಕೇಂದ್ರವಾಗಿ ಹೊರಹೊಮ್ಮಿದೆ.

1994ರಲ್ಲಿ ಸ್ಥಾಪನೆಯಾದ ಈ ಸಂಸ್ಥೆಯು ಮೂರು ವರ್ಷದ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನ ಡಿಪ್ಲೋಮಾ ಕೋರ್ಸ್‌ನ್ನು ನೀಡುತ್ತಿದ್ದು, ವಿದ್ಯಾರ್ಥಿ ಗಳಿಗೆ ತಾಂತ್ರಿಕ ಜ್ಞಾನ ಮತ್ತು ಕೈಚಳಕ ಎರಡನ್ನೂ ಒಟ್ಟಿಗೆ ಬೆಳೆಸುವ ಮಹತ್ವದ ವೇದಿಕೆಯನ್ನು ಒದಗಿಸುತ್ತಿದೆ.

ಭಾರತ ಸರ್ಕಾರದ ಜವಳಿ ಮಂತ್ರಾಲಯದ ಅಭಿವೃದ್ಧಿ ಆಯುಕ್ತರಿಂದ ಮಾನ್ಯತೆ ಪಡೆದಿರುವ ಈ ಸಂಸ್ಥೆ, ನವದೆಹಲಿಯ ಮಾರ್ಗಸೂಚಿಗಳ ಪ್ರಕಾರ ಪಠ್ಯಕ್ರಮ ಮತ್ತು ಪರೀಕ್ಷಾ ಪದ್ಧತಿಯನ್ನು ಅನುಸರಿಸುತ್ತಿದ್ದು, ದೇಶದ ಇಂತಹ ಮಾದರಿಯ ಸಂಸ್ಥೆಗಳ ಪೈಕಿ ಪ್ರಮುಖ ಸ್ಥಾನವನ್ನು ಪಡೆದುಕೊಂಡಿದೆ.

ಭಾರತದಲ್ಲಿ ಇಂತಹ ಮಾದರಿಯ ಒಟ್ಟು 11 ಕೈಮಗ್ಗ ತಂತ್ರಜ್ಞಾನ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಸೇಲಂ, ವಾರಣಾಸಿ, ಜೋಧಪುರ, ಗೌಹಾತಿ, ಕಣ್ಣೂರ ಸೇರಿದಂತೆ ಹಲವು ರಾಜ್ಯಗಳಲ್ಲಿ ಇವುಗಳಿವೆ. ಆ ಪೈಕಿ ಗದಗದ ಈ ಸಂಸ್ಥೆ ತನ್ನ ಸೌಲಭ್ಯಗಳು ಹಾಗೂ ಗುಣಮಟ್ಟದ ಶಿಕ್ಷಣದ ಮೂಲಕ ವಿಶಿಷ್ಟ ಗುರುತನ್ನು ಮೂಡಿಸಿಕೊಂಡಿದೆ.

ಗದಗಿನ ನರಸಾಪೂರದಲ್ಲಿ 8.3 ಎಕರೆ ವ್ಯಾಪ್ತಿಯ ಸ್ವಂತ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಸಂಸ್ಥೆ, ವಿದ್ಯಾರ್ಥಿಗಳಿಗೆ ಅಗತ್ಯವಿರುವ ಎಲ್ಲಾ ಆಧುನಿಕ ಸೌಲಭ್ಯಗಳನ್ನು ಒದಗಿಸುತ್ತಿದೆ. ಡೈಯಿಂಗ್ ಮತ್ತು ಪ್ರಿಂಟಿಂಗ್, ಟೆಸ್ಟಿಂಗ್, ಕೈಮಗ್ಗ ಹಾಗೂ ವಿದ್ಯುತ್ ಮಗ್ಗ, ಜಕಾರ್ಡ್ ಮತ್ತು ಕಂಪ್ಯೂಟರ್ ಆಧಾರಿತ ಟೆಕ್ಸ್ಟೈಲ್ ಡಿಸೈನಿಂಗ್ (ಅಂಖಿಆ) ಲ್ಯಾಬ್‌ಗಳು ವಿದ್ಯಾರ್ಥಿಗಳ ಪ್ರಾಯೋಗಿಕ ಜ್ಞಾನವನ್ನು ಹೆಚ್ಚಿಸುತ್ತಿವೆ. ಸ್ಮಾರ್ಟ್ ಬೋರ್ಡ್‌ಗಳ ಮೂಲಕ ತರಗತಿ ಬೋಧನೆ ನಡೆಯುತ್ತಿದ್ದು, ಇ–ಗ್ರಂಥಾಲಯ ಹಾಗೂ ಸುಸಜ್ಜಿತ ಗ್ರಂಥಾಲಯ ವಿದ್ಯಾರ್ಥಿಗಳ ಅಧ್ಯಯನಕ್ಕೆ ಮತ್ತಷ್ಟು ಬಲ ನೀಡುತ್ತಿವೆ.

ವಿದ್ಯಾರ್ಥಿಗಳ ವಸತಿ ವ್ಯವಸ್ಥೆಯಲ್ಲಿಯೂ ಸಂಸ್ಥೆ ವಿಶೇಷ ಗಮನ ಹರಿಸಿದ್ದು, ಪುರುಷ ವಿದ್ಯಾರ್ಥಿಗಳಿಗೆ ವಸತಿ ನಿಲಯದ ಸೌಲಭ್ಯ ಕಲ್ಪಿಸಲಾಗಿದೆ. ಶುದ್ಧ ಕುಡಿಯುವ ನೀರು ಹಾಗೂ ಸ್ನಾನಕ್ಕೆ ಬಿಸಿ ನೀರಿನ ವ್ಯವಸ್ಥೆಗೆ ಸೋಲಾರ್ ವ್ಯವಸ್ಥೆ ಅಳವಡಿಸಿರುವುದು ಗಮನಾರ್ಹವಾಗಿದೆ.

ವಿದ್ಯಾರ್ಥಿನಿಯರಿಗೆ ಸರ್ಕಾರಿ ವಸತಿ ನಿಲಯಗಳಲ್ಲಿ ವಸತಿ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಅನುಭವ ಹೊಂದಿದ ಬೋಧಕರಿಂದ ತರಬೇತಿ ನೀಡಲಾಗುತ್ತಿದ್ದು, ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಒತ್ತು ನೀಡಲಾಗುತ್ತಿದೆ.

ಪ್ರತಿ ವರ್ಷ ಪ್ರಥಮ ವರ್ಷದ ಪ್ರವೇಶ ಮತ್ತು ಲ್ಯಾಟರಲ್ ಎಂಟ್ರಿ ಮೂಲಕ ಮೂರನೇ ಸೆಮಿಸ್ಟರ್‌ಗೆ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ. ಪ್ರಥಮ ವರ್ಷದ ಪ್ರವೇಶಕ್ಕಾಗಿ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿದ್ದು, ಇಂಗ್ಲಿಷ್ ಕಡ್ಡಾಯ ವಿಷಯವಾಗಿರಬೇಕು. ಸಾಮಾನ್ಯ ವರ್ಗದವರಿಗೆ 15 ರಿಂದ 23 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ 15 ರಿಂದ 25 ವರ್ಷ ವಯೋಮಿತಿ ನಿಗದಿಯಾಗಿದೆ.

ಲ್ಯಾಟರಲ್ ಎಂಟ್ರಿ ಮೂಲಕ ಮೂರನೇ ಸೆಮಿಸ್ಟರ್‌ಗೆ ಪಿಯುಸಿ ವಿಜ್ಞಾನ ವಿಭಾಗ, ಐಟಿಐ ಅಥವಾ ಜವಳಿ ಸಂಬಂಧಿತ ವೃತ್ತಿಪರ ಕೋರ್ಸ್ ಉತ್ತೀರ್ಣರಾದವರಿಗೆ ಅವಕಾಶವಿದ್ದು, ಸಾಮಾನ್ಯ ವರ್ಗದವರಿಗೆ 25 ವರ್ಷ ಮತ್ತು ಎಸ್‌ಸಿ/ಎಸ್‌ಟಿ ವರ್ಗದವರಿಗೆ 27 ವರ್ಷ ವಯೋಮಿತಿ ನಿಗದಿಯಾಗಿದೆ.

ಪ್ರವೇಶ ಪಡೆದ ಪ್ರತಿಯೊಬ್ಬ ವಿದ್ಯಾರ್ಥಿಗೂ ಪ್ರತಿ ತಿಂಗಳು ರೂ. 2,500 ಶಿಷ್ಯವೇತನ ನೀಡಲಾಗುವುದು ಎಂಬುದು ವಿಶೇಷ.

ಸಮಗ್ರ ಸೌಲಭ್ಯಗಳು, ಗುಣಮಟ್ಟದ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳಿಗೆ ದಾರಿ ತೆರೆದಿಡುವ ತರಬೇತಿಯೊಂದಿಗೆ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ ಜಿಲ್ಲೆಯ ಶೈಕ್ಷಣಿಕ ಕ್ಷೇತ್ರದಲ್ಲಿ ಒಂದು ಮಾದರಿ ಸಂಸ್ಥೆಯಾಗಿ ಬೆಳೆಯುತ್ತಿದ್ದು, ಕೈಮಗ್ಗ ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಹೊಂದಿದ ಯುವಕರಿಗೆ ಭವಿಷ್ಯದ ಭರವಸೆಯ ದಾರಿಯಾಗಿ ಪರಿಣಮಿಸಿದೆ.

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ, ಗದಗ ಸಂಸ್ಥೆಯಲ್ಲಿ 2008 ರಿಂದ ಕಲಿತ ವಿಧ್ಯಾರ್ಥಿಗಳಲ್ಲಿ 23 ಅಭ್ಯರ್ಥಿಗಳು ರಾಜ್ಯದ ವಿವಿಧ ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಂಶುಪಾಲರ ಕಚೇರಿ, ನರಸಾಪೂರ, ಗದಗ–ಬೆಟಗೇರಿ ಸಂಪರ್ಕಿಸಬಹುದಾಗಿದೆ. ಮೊಬೈಲ್ ಸಂಖ್ಯೆ 9916143619 ಹಾಗೂ ದೂರವಾಣಿ 08372–259664 ಮೂಲಕ ಸಂಪರ್ಕಿಸಬಹುದು. ಇ–ಮೇಲ್ principalkhtigadag@gmail.com ಮತ್ತು khtigadag.ac.in ವೆಬ್‌ಸೈಟ್ ಮೂಲಕವೂ ವಿವರಗಳನ್ನು ಪಡೆಯಬಹುದಾಗಿದೆ.

**ವಿಶೇಷ ಲೇಖನ:**
**ವಸಂತ ಬಿ ಮಡ್ಲೂರ, ಸಹಾಯಕ ನಿರ್ದೇಶಕರು, ವಾರ್ತಾ & ಸಾರ್ವಜನಿಕ ಸಂಪರ್ಕ ಇಲಾಖೆ**



# ಮಹಿಳೆಯ ಬದುಕು ಸೇವೆಯಲ್ಲಿ ಲೀನ : ಡಾ. ಮಹಾಲಕ್ಷ್ಮೀ



ಬೆಳಗಾವಿ ವಾರ್ತೆ ಗಂಗಾವತಿ : ಸೇವೆಗೆ ಮತ್ತೊಂದು ಹೆಸರು ಮಹಿಳೆ ಆಕೆಯ ಇಡಿ ಬದುಕು ಮಾನವ ಜನಾಂಗದ ಸೇವೆಯಲ್ಲೇ ಸವೆದು ಹೋಗುತ್ತದೆ. ಆಕೆ ತಾಯಿಯಾಗಿ ಮಗನ ಸೇವೆಯನ್ನು ಪತ್ನಿಯಾಗಿ ಗಂಡನ ಸೇವೆಯನ್ನು ಸೊಸೆಯಾಗಿ ಅತ್ತೆಮಾವರ ಸೇವೆಯನ್ನು ಮಾಡುವಲ್ಲಿ ತನ್ನ ಬದುಕನ್ನ ಕಳೆದುಕೊಳ್ಳುತ್ತಾಳೆ .ಹಾಗಾಗಿ ಸೇವೆ ಶಬ್ದಕ್ಕೆ ಮಹಿಳೆ ಪರ್ಯಾಯ ಆಕೆಯನ್ನು ಹೊರತುಪಡಿಸಿ ಸೇವೆ ಇಲ್ಲ ಮಹಿಳೆಯ ಸೇವೆಯೇ ಮಾನವ ಜನಾಂಗಕ್ಕೆ ಶ್ರೇಷ್ಠ ಸೇವೆಯಾಗಿದೆ. ಎಂದು ಕರುಣಾ ರೂರಲ್ ಡೆವಲಪ್ಮೆಂಟ್ ಸೊಸೈಟಿಯ ಸಂಚಾಲಕರಾದ ಸಮಾಜ ಸೇವಕಿ ಡಾ. ಮಹಾಲಕ್ಷ್ಮಿ ಕೇಸರಹಟ್ಟಿ ಅವರು ಅಭಿಪ್ರಾಯ ಪಟ್ಟರು.

ಅವರು ಗಂಗಾವತಿಯ ಶ್ರೀ ಕೊಟ್ಟೂರೇಶ್ವರ ವಿದ್ಯಾವರ್ಧಕ ಸಂಘದ ಕಲ್ಮಠ ಶ್ರೀ ಚನ್ನಬಸವಸ್ವಾಮಿ ಮಹಿಳಾ ಮಹಾವಿದ್ಯಾಲಯದ ಎನ್ಎಸ್ಎಸ್ ಘಟಕಗಳ 2025–26 ನೇ ಸಾಲಿನ ವಿಶೇಷ ವಾರ್ಷಿಕ ಶಿಬಿರ ದಲ್ಲಿ ಯುವತಿಯರು ಮತ್ತು ಸಮಾಜಸೇವೆ ಎನ್ನುವ ವಿಷಯದ ಮೇಲೆ ಉಪನ್ಯಾಸ ನೀಡಿದರು.

ಸೇವೆಯ ಬಗ್ಗೆ ಮತ್ತಷ್ಟು ಅರಿಯಲು ಎನ್ಎಸ್ಎಸ್ ಒಂದು ಉತ್ತಮ ಯೋಜನೆಯಾಗಿದೆ. ಇದರ ಲಾಭವನ್ನು ವಿದ್ಯಾರ್ಥಿನಿಯರು ಕಲಿಯಬೇಕೆಂದು ಕರೆನೀಡಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಡಾ. ಶರಣಬಸಪ್ಪ ಕೋಲ್ಕಾರ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಕಾಲೇಜಿನಲ್ಲಿ ಎನ್ಎಸ್ಎಸ್ ಘಟಕಗಳು ಮತ್ತು ಶಿಬಿರಗಳು ನಡೆಸಿದ ಸಾರ್ಥಕ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು.

ಉಪಪ್ರಾಚಾರ್ಯ ಡಾ. ಕೆ.ಎಂ .ಬಸವರಾಜ್ ಸ್ವಾಗತಿಸಿದರು. ಎನ್ಎಸ್ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಡಾ. ಸುರೇಶಗೌಡ, ಡಾ. ಬಸಮ್ಮ ಶಿಗ್ಗಾವಿ , ಉಪನ್ಯಾಸಕರಾದ ಪ್ರೊ. ಜಿ. ಬಸವರಾಜ್, ಡಾ. ಶಾರದಾ ಪಾಟೀಲ್, ಡಾ. ಜರೀನಾ,ಶಿವಮ್ಮ, ಶಾಂತಮ್ಮ, ವಿಜಯಲಕ್ಷ್ಮಿ, ರಷ್ಮೀ, ಹನುಮಂತ, ಮೆಹಕ್ ಸಾನಿಯಾ, ಶಂಕರನಾಗ್, ಸತೀಶ್, ನಿಮಿಷಾ ಮುಂತಾದವರು ಉಪಸ್ಥಿತರಿದ್ದರು.

# ಬಹಿರಂಗ ಹರಾಜು

ಗದಗ : ನರೇಗಲ್ಲ ಪಟ್ಟಣ ಪಂಚಾಯತ ಕಾರ್ಯಾಲಯದ ವ್ಯಾಪ್ತಿಗೆ ಬರುವ ಗುರುತಿನ ಚೀಟಿ ಹೊಂದಿದ ಹಾಗೂ ಗುರುತಿನ ಚೀಟಿ ಹೊಂದದೇ ಇರುವ ಬೀದಿ ಬದಿ ವ್ಯಾಪಾರಸ್ಥರ ಪ್ರತಿ ದಿನದ, ಡಬ್ಬಿ ಅಂಗಡಿಗಳ ಹಾಗೂ ವಾರದ ಸಂತೆ (ಸೋಮವಾರ)ದ ಸಂತೆ ಕರ (ಹಂಗಾಮಿ ಫೀ) ಸಂಗ್ರಹದ ಕಾರ್ಯವನ್ನು ಗುತ್ತಿಗೆ ಮೂಲಕ ನಿರ್ವಹಣೆಯನ್ನು ಮಾಡಲು ಬಹಿರಂಗ ಹರಾಜು ಪ್ರಕ್ರಿಯೇಯನ್ನು ದಿನಾಂಕ : 30/04/2026 ರಂದು ಮಧ್ಯಾನ್ಹ 3.30 ಗಂಟೆಗೆ ನಡೆಸಲಾಗುವುದು.

ಹೆಚ್ಚಿನ ಮಾಹಿತಾಗಿ ನರೇಗಲ್ ಪಟ್ಟಣ ಪಂಚಾಯತ ಕಾರ್ಯಾಲಯ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ನಿಲಯಗಳ ನಿರ್ವಹಣೆ ಕುರಿತು ಕಾರ್ಯಾಗಾರ




**ಬೆಳಗಾವಿ ವಾರ್ತೆ ಗದಗ:** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಗದಗ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗರವರ ಸಂಯುಕ್ತಾಶ್ರಯದಲ್ಲಿ ವಸತಿ ನಿಲಯಗಳ ಮತ್ತು ವಸತಿ ಶಾಲೆಗಳ ನಿರ್ವಹಣೆ, ದಾಖಲಾತಿಗಳ ನಿರ್ವಹಣೆ, ಆಹಾರ ಸುರಕ್ಷತೆ ಹಾಗೂ ಇ ಗುರುತು ಹಾಗೂ ಬಿಲ್‌ಗಳ ತಯಾರಿಕೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ ಇವರು ಉದ್ಘಾಟಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ.ನಂದಾ ಹಣಬರಟ್ಟಿ ಮಾತನಾಡಿ ಕಾರ್ಯಾಗಾರದ ವಿಷಯಗಳ ಕುರಿತು ಎಲ್ಲ ಸಿಬ್ಬಂದಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದರು.

ನಿಲಯಗಳಲ್ಲಿ ದಾಖಲಾತಿಗಳನ್ನು ನಿರ್ವಹಿಸುವ ಕುರಿತು ಬಿ.ಎಫ್ ಬಡಿಗೇರ, ನಿಲಯಗಳ ನಿರ್ವಹಣೆ ಕುರಿತು ಉದಯಕುಮಾರ ಯಲಿವಾಳ, ಆಹಾರ ಸಾಮಗ್ರಿಗಳ ಬೇಡಿಕೆ ಕುರಿತು ಗೋಪಾಲ ಟಿ ಲಮಾಣಿ, ತಯಾರಿಕೆ ಕುರಿತು ಮಲ್ಲಿಕಾರ್ಜುನ ಹೊಸೂರ ಲೆಕ್ಕ ಅಧೀಕ್ಷಕರು ಜಿಲ್ಲಾ ಪಂಚಾಯತ ಗದಗ ಹಾಗೂ ಸರ್ಫರಾಜ ಅಹಮ್ಮದ ಮುಖ್ಯ ಲೆಕ್ಕಿಗರ ಜಿಲ್ಲಾ ಖಜಾನೆ ಇಲಾಖೆ ಗದಗ. ಹಾಗೂ ಆಹಾರ ಸುರಕ್ಷತೆಯ ಕುರಿತು ರಾಜೇಂದ್ರ ಗಡಾದ ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿಗಳು ಗದಗ ರವರು ಉಪನ್ಯಾಸವನ್ನು ನೀಡಿದರು.

ಈ ಸಂದರ್ಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಎಸ್.ನೀಲಗುಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿಯ ಪತ್ರಾಂಕಿತ ವ್ಯವಸ್ಥಾಪಕರಾದ ಶ್ರೀಮತಿ ಮಂಜುಳಾ ಸೋಮಕ್ಕನವರ, ಸಹಾಯಕ ನಿರ್ದೇಶಕರಾದ ಗೋಪಾಲ ಟಿ ಲಮಾಣಿ, ಉದಯಕುಮಾರ ಯಲಿವಾಳ, ಶ್ರೀಮತಿ ಗೀತಾ ಆಲೂರ, ಕಛೇರಿ ಸಿಬ್ಬಂದಿಗಳು ಹಾಗೂ ಜಿಲ್ಲೆಯ ಎಲ್ಲ ನಿಲಯ ಮೇಲ್ವಿಚಾರಕರು ಹಾಜರಿದ್ದರು.

# ಸಿ.ಸಿ. ರಸ್ತೆ ಮಾಡಲು ಮನವಿ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ 14ನೇ ವಾರ್ಡಿನ ಪರ್ವತ ಮಲ್ಲಯ್ಯ ದೇವಸ್ಥಾನದಿಂದ ಹಳೆ ಬಸ್ ನಿಲ್ದಾಣದವರೆಗಿನ ರಸ್ತೆಯನ್ನು ಸಿಸಿ ರಸ್ತೆಯನ್ನಾಗಿ ಮಾಡಿಸುವಂತೆ ಒತ್ತಾಯಿಸಿ ಪುರಸಭೆಯ ಮುಖ್ಯ ಅಧಿಕಾರಿ ಪರಶುರಾಮ ಅವರಿಗೆ ಅಖಂಡ ಭಾರತ ಯುವ ಸೇನೆಯ ಪದಾಧಿಕಾರಿಗಳು ಮನವಿ ಪತ್ರ ಸಲ್ಲಿಸಿದರು.

ಮನವಿ ಪತ್ರದಲ್ಲಿ ಶ್ರೀ ಸೋಮೇಶ್ವರ ಪಾದಗಟ್ಟಿಯಿಂದ ಹಳೆಯ ಬಸ್ ನಿಲ್ದಾಣದವರೆಗಿನ ರಸ್ತೆಯನ್ನು ಸುಮಾರು 10 ವರ್ಷಗಳ ಹಿಂದೆಯೇ ವ್ಯಾಪಾರಸ್ಥರು ಸ್ವಯಂ ಪ್ರೇರಿತರಾಗಿ ಅತಿಕ್ರಮಣ ತೆರವು ಗೊಳಿಸಿದ್ದು ಈಗ ಪಾದಗಟ್ಟೆಯಿಂದ ಪರ್ವತ ಮಲ್ಲಯ್ಯ ದೇವಸ್ಥಾನದವರೆಗೆ ಸಿಸಿ ರಸ್ತೆ ಮಾಡಿದ್ದು ಬಾಕಿ ಇರುವ ರಸ್ತೆಯನ್ನು 16ನೇ ಹಣಕಾಸಿನ ಯೋಜನೆ ಅಡಿ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಕೊಟ್ರೇಶ ಕತ್ತಿ, ಮಂಜುನಾಥ ಗಾಂಜಿ, ವಿಜಿ ಪುರಾಣಿಕಮಠ, ಅಭಿಷೇಕ ಗೊಂಗಡಿ, ಗಣೇಶ ಬೆಳವಿಗಿ, ಗಂಗಾಧರ ಬೆಳವಿಗಿ ಸೇರಿದಂತೆ ಅನೇಕರಿದ್ದರು.

# ದೇವಸ್ಥಾನ ಉದ್ಘಾಟನೆ: ಕಳಸಾರೋಹಣ ಮಹೋತ್ಸವ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** 'ವೀರಶೈವ ಧರ್ಮದ ಮೌಲ್ಯಗಳನ್ನು ಸಮಾಜದ ಪ್ರತಿಯೊಬ್ಬರಿ ಗೂ ತಲುಪಿಸಿ, ವ್ಯಕ್ತಿತ್ವವನ್ನು ತಿದ್ದಿ ತೀಡು ವಲ್ಲಿ ಪಂಚಪೀಠಾಧಿಪತಿಗಳ ಕೊಡುಗೆ ಅಪಾರ' ಎಂದು ಮಾಜಿ ಸಚಿವ ಶಂಕರ ಪಾಟೀಲಮುನೇನಕೊಪ್ಪ ಅಭಿಪ್ರಾಯ ಪಟ್ಟರು.

ಹುಬ್ಬಳ್ಳಿ ತಾಲೂಕಿನ ಸುಳ್ಳ ಗ್ರಾಮದಲ್ಲಿ ನಡೆದ ಶ್ರೀ ಕಲ್ಮೇಶ್ವರ ದೇವಸ್ಥಾನದ ಉದ್ಘಾಟನೆ ಹಾಗೂ ಕಳಸಾರೋಹಣ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸುಳ್ಳ ಗ್ರಾಮದಲ್ಲಿ ಇಂತಹ ಅರ್ಥ ಪೂರ್ಣ ಧಾರ್ಮಿಕ ಸಭೆಯನ್ನು ಆಯೋಜಿಸಿರುವುದು ಅಭಿನಂದನೀಯ. ಜನಜಾಗೃತಿ ಮೂಡಿಸುವ ಮೂಲಕ ಧರ್ಮದ ಆಶಯಗಳನ್ನು ಮನೆಮನೆಗೆ ತಲುಪಿಸುವ ಕೆಲಸ ಇಲ್ಲಿ ನಡೆದಿದೆ. ಮಾನವ ಜನ್ಮ ಸಾರ್ಥಕವಾಗಬೇಕೆಂಬ ಪಂಚಪೀಠಾಧೀಶ್ವರರ ಧರ್ಮ ಸಂದೇಶ ಸದಾ ನಮ್ಮ ದಾರಿದೀಪವಾಗಲಿ' ಎಂದು ಅವರು ಹೇಳಿದರು. ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು ಶ್ರೀಮದ್ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠ, ಬಾಳೆಹೊನ್ನೂರು, ಜಗದ್ಗುರು ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಶ್ರೀಶೈಲ ಜಗದ್ಗುರು ಪೀಠ, ಶ್ರೀಶೈಲ ಕ್ಷೇತ್ರ, ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಶ್ರೀ ಉಜ್ಜಯಿನಿ ಸದ್ಧರ್ಮ ಸಿಂಹಾಸನ ಮಹಾಸಂಸ್ಥಾನ ಪೀಠ, ಉಜ್ಜಯಿನಿ ಇವರುಗಳು ಸಾನಿಧ್ಯ ವಹಿಸಿದ್ದರು.

# ಪ್ರಗತಿ ಪರಿಶೀಲನಾ ಸಭೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ಸರ್ಕಾರದ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಫಲಾನುಭವಿಗಳಿಗೆ ಸಮಯಕ್ಕೆ ಸರಿಯಾಗಿ ಸೌಲಭ್ಯಗಳು ದೊರಕುವಂತೆ ಮಾಡಲು ಕ್ಷೇತ್ರ ಮಟ್ಟದ ಅಧಿಕಾರಿಗಳು ಹೆಚ್ಚು ಚುರುಕಾಗಿ ಕಾರ್ಯನಿರ್ವಹಿಸಬೇಕೆಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಮಸಳಿ ಖಡಕ್ಕಾಗಿ ಎಚ್ಚರಿಕೆ ನೀಡಿದರು.

ತಾಪಂ ಸಭಾಭವನದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ ಸರ್ಕಾರದ ಯೋಜನೆಗಳ ಪ್ರಯೋಜನಗಳು ಕಾಗದದಲ್ಲೇ ಉಳಿಯದೆ ನೈಜವಾಗಿ ಜನರಿಗೆ ತಲುಪಬೇಕು. ಈ ನಿಟ್ಟಿನಲ್ಲಿ ಅರ್ಜಿಗಳ ಸ್ವೀಕೃತಿ, ಪರಿಶೀಲನೆ ಮತ್ತು ಮಂಜೂರಾತಿ ಹಂತಗಳಲ್ಲಿ ವೇಗ ಹೆಚ್ಚಿಸುವುದು ಮುಖ್ಯವಾಗಿದೆ. ಯಾವುದೇ ಅರ್ಹ ವ್ಯಕ್ತಿ ಸೌಲಭ್ಯದಿಂದ ವಂಚಿತರಾಗದಂತೆ ಅಧಿಕಾರಿಗಳು ಕಟ್ಟುನಿಟ್ಟಿನ ನಿಗಾ ವಹಿಸಬೇಕು. ಗ್ರಾಮ ಮಟ್ಟದಲ್ಲಿ ಜನರಿಂದ ಬರುತ್ತಿರುವ ಸಮಸ್ಯೆಗಳು ಹಾಗೂ ಅಸಮಾಧಾನಗಳನ್ನು ಗಂಭೀರವಾಗಿ ಪರಿಗಣಿಸಿ, ಸ್ಥಳದಲ್ಲಿಯೇ ಪರಿಹಾರ ಕಂಡುಹಿಡಿಯುವ ಮೂಲಕ ಆಡಳಿತದ ಮೇಲೆ ಜನರಲ್ಲಿ ನಂಬಿಕೆ ಮೂಡಿಸಬೇಕೆಂದರು.

ಗ್ಯಾರಂಟಿ ಸಮಿತಿಯ ಅಧ್ಯಕ್ಷ ಗಂಗಪ್ಪ ಹುರಕಡ್ಲಿ ಮಾತನಾಡಿ, ಗ್ಯಾರಂಟಿ ಯೋಜನೆಗಳು ಜನಜೀವನಕ್ಕೆ ನೇರವಾಗಿ ಸ್ಪರ್ಶಿಸುವುದರಿಂದ ಅವುಗಳ ಅನುಷ್ಠಾನದಲ್ಲಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ಇರಬಾರದು. ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ಸಮರ್ಪಕವಾಗಿ ಸೌಲಭ್ಯ ತಲುಪುವಂತೆ ಎಲ್ಲಾ ಅಧಿಕಾರಿ ಗಳು ಒಗ್ಗಟ್ಟಿನಿಂದ ಕೆಲಸ ಮಾಡಬೇಕೆಂ ದರು.

ಸಭೆಯಲ್ಲಿ ತಾಪಂ ಸಹಾಯಕ ನಿರ್ದೇಶಕರು ಮಹಮ್ಮದ್ ಗೌಸ್ ರಿಸಲ್ದಾರ್, ವಿಜಯ್ ಪಾಟೀಲ್, ತಾಲೂಕ ಯೋಜನಾಧಿಕಾರಿ ಗೌಡಪ್ಪ ಗಿರಿಮಲ್ಲನವರ, ತಾಪಂ ಸಿಬ್ಬಂದಿ ಸಂಗನಗೌಡ ಹಂದ್ರಾಳ, ಲಿಂಗರಾಜ ಹಲಕರ್ಣಿಮಠ, ನಾಗಪ್ಪ ಕಳ್ಳಿಮನಿ, ಯಲ್ಲಪ್ಪ ಹುಲಿಮನಿ, ಮಡಿವಾಳಪ್ಪ ಚಿಣ್ಣನವರು ಸೇರಿದಂತೆ ಸಮಿತಿಯ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿದ್ದರು.

# ಬೆಂಗಳೂರು 'ಗ್ಯಾಸ್ ಚೇಂಬರ್' ಆಗದಂತೆ ತಡೆಯಲು ಹಸಿರು ಹೊದಿಕೆ ಹೆಚ್ಚಳ ಅನಿವಾರ್ಯ: ಅರಣ್ಯ ಸಚಿವ ಈಶ್ವರ ಖಂಡ್ರೆ



ಬೆಂಗಳೂರು: ವೈಜ್ಞಾನಿಕವಾಗಿ ಪರಿಸರ ಸಮತೋಲನ ಕಾಪಾಡಿಕೊಳ್ಳಲು ಶೇ. 33% ರಷ್ಟು ಹಸಿರು ಹೊದಿಕೆ ಇದ್ದಾಗ ಮಾತ್ರ ಆರೋಗ್ಯಕರ ನಗರವನ್ನು ಕಟ್ಟಲು ಸಾಧ್ಯ, ಬೆಳೆಯುತ್ತಿರುವ ಬೆಂಗಳೂರಿನಲ್ಲಿ ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, 1.40 ಕೋಟಿ ಜನಸಂಖ್ಯೆ ಇರುವ ಬೆಂಗಳೂರು ನಗರದಲ್ಲಿ ಕನಿಷ್ಠ 10 ಕೋಟಿ ಮರಗಳನ್ನು ಪೋಷಿಸುವ ಅಗತ್ಯವಿದೆ ಎಂದು ಅರಣ್ಯ, ಪರಿಸರ ಜಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಬಿ ಖಂಡ್ರೆ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಅಸರ್ ಸೋಷಿಯಲ್ ಇಂಪ್ಯಾಕ್ಟ್ ಅಡ್ವೈಸರ್ ಸಂಸ್ಥೆಯ ಸಹಯೋಗದಲ್ಲಿ ಇಂದು ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿದ್ದ ಬೆಂಗಳೂರಿನಲ್ಲಿ ತಾಪಮಾನ ವೈಪರೀತ್ಯ ಹಾಗೂ ಅದರ ಪರಿಣಾಮಗಳ ಕುರಿತು ಮಾಧ್ಯಮ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಒಬ್ಬ ಮನಷ್ಯನಿಗೆ ಉತ್ತಮ ಆಮ್ಲಜನಕ ದೊರಕಲು ಕನಿಷ್ಠ 7 ಮರಗಳು ಇರಬೇಕು ಎಂದು ವಿಜ್ಞಾನ ಪ್ರತಿಪಾದಿಸುತ್ತದೆ ಎಂದರು.

ಬೆಂಗಳೂರಿನ ಪರಿಸರದಲ್ಲಾಗುತ್ತಿರುವ ಬದಲಾವಣೆ ಹಾಗೂ ಅರಣ್ಯ ಇಲಾಖೆಯ ಮುಂದಿನ ಯೋಜನೆಗಳ ಕುರಿತು ಸುದೀರ್ಘವಾಗಿ ಮಾತನಾಡಿದ ಅವರು ಒಂದು ಕಾಲದಲ್ಲಿ 'ನಿವೃತ್ತರ ಸ್ವರ್ಗ' ಹಾಗೂ 'ಹವಾನಿಯಂತ್ರಿತ ನಗರ' ಎಂದು ಖ್ಯಾತಿ ಪಡೆದಿದ್ದ ಬೆಂಗಳೂರು ಇಂದು ಕಾಂಕ್ರೀಟ್ ಜಂಗಲ್ ಆಗಿ ಮಾರ್ಪಡುತ್ತಿರುವುದು ಆತಂಕಕಾರಿ ವಿಷಯವಾಗಿದೆ.

ಬೆಂಗಳೂರು ಇದೇ ರೀತಿಯ ಬೆಳವಣಿಗೆ ಹಾಗೂ ವಾಹನ ದಟ್ಟಣೆ ಹೆಚ್ಚಿಸಿಕೊಂಡಲ್ಲಿ ನವದೆಹಲಿಯಂತೆ 'ಗ್ಯಾಸ್ ಚೇಂಬರ್' ಆಗುವುದನ್ನು ತಪ್ಪಿಸಲು ಹಸಿರು ಹೊದಿಕೆಯನ್ನು ಹೆಚ್ಚಿಸುವ ತತ್ ಕ್ಷಣದ ಅಗತ್ಯವಿದೆ ಎಂದು ಹೇಳಿದರು.

**ಗತವೈಭವದ ಮರುಸ್ಥಾಪನೆ:**

ಕೆಂಪೇಗೌಡರು ನಿರ್ಮಿಸಿದ ಹಸಿರು ಬೆಂಗಳೂರನ್ನು ಮರಳಿ ಪಡೆಯಲು ಅರಣ್ಯ ಇಲಾಖೆ ಬದ್ಧವಾಗಿದೆ. ನಗರದ ಸುತ್ತಮುತ್ತಲ ಹಸಿರು ಹೊದಿಕೆಯನ್ನು ಮರುಸ್ಥಾಪಿಸಲು ಮತ್ತು ಪರಿಸರ ಮಾಲಿನ್ಯ ತಡೆಗಟ್ಟಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

**ಮಾಲಿನ್ಯ ಮತ್ತು ಕೆರೆಗಳ ಅವನತಿ:**

ಬೆಂಗಳೂರಿನಲ್ಲಿದ್ದ ಸುಮಾರು 250 ಕೆರೆಗಳಲ್ಲಿ ಹಲವು ಅಭಿವೃದ್ಧಿಯಲ್ಲಿ ಮಾಯವಾಗಿದ್ದು, ಇನ್ನೂ ಕೆಲವು ಇಂದು ತ್ಯಾಜ್ಯ ನೀರು ಸೇರಿ ಕಲುಷಿತಗೊಂಡಿವೆ. ಇದರಿಂದ ಜಲ ಮತ್ತು ವಾಯು ಮಾಲಿನ್ಯ ಉಂಟಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸಂಚಾರ ದಟ್ಟಣೆ ಮತ್ತು ವಾಹನಗಳ ಕಾರ್ಬನ್ ಡೈಆಕ್ಸೈಡ್ ಹೊರಸೂಸುವಿಕೆಯಿಂದ ತಾಪಮಾನ ಏರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

**11 ಕೋಟಿ ಸಸಿಗಳ ನಾಟಿ:**

ಅರಣ್ಯ ಇಲಾಖೆಯ ಸಾಧನೆಯನ್ನು ಹಂಚಿಕೊಂಡ ಸಚಿವರು, "ಕಳೆದ ಮೂರು ವರ್ಷಗಳಲ್ಲಿ ರಾಜ್ಯದಾದ್ಯಂತ ಸುಮಾರು 11 ಕೋಟಿ ಸಸಿಗಳನ್ನು ನೆಡಲಾಗಿದೆ. ಇವುಗಳಲ್ಲಿ ಎಷ್ಟು ಸಸಿಗಳು ಬದುಕುಳಿದಿವೆ ಎಂಬುದರ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸಿ, ಆ ವರದಿಯನ್ನು ಇಲಾಖೆಯ ವೆಬ್ಸೈಟ್ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಅಪ್ಲೋಡ್ ಮಾಡಲು ಸೂಚನೆ ನೀಡಿದ್ದೇನೆ," ಎಂದು ಮಾಹಿತಿ ನೀಡಿದರು.

ಬೆಂಗಳೂರಿನ 'ಶ್ವಾಸ ತಾಣ'ಗಳ ರಕ್ಷಣೆಗೆ ಅರಣ್ಯ ಇಲಾಖೆ ಮೆಗಾ ಪ್ಲಾನ್ ರೂಪಿಸಿದ್ದು, ನಗರದ ಆಯಕಟ್ಟಿನ ಪ್ರದೇಶಗಳಾದ ಕಾಡುಗೋಡಿ ಮತ್ತು ತುರಹಳ್ಳಿ ಭಾಗದಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಸುಮಾರು ?10,000 ಕೋಟಿ ಮೌಲ್ಯದ ಅರಣ್ಯ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ. ಸಿಲಿಕಾನ್ ಸಿಟಿಯಲ್ಲಿ ದಿನೇ ದಿನೇ ಕುಸಿಯುತ್ತಿರುವ ಹಸಿರು ಹೊದಿಕೆಯನ್ನು ಹೆಚ್ಚಿಸಲು ಮತ್ತು ಪರಿಸರ ಸಮತೋಲನ ಕಾಯ್ದುಕೊಳ್ಳಲು ಕರ್ನಾಟಕ ಅರಣ್ಯ ಇಲಾಖೆ ಐತಿಹಾಸಿಕ ಹೆಜ್ಜೆ ಇರಿಸಿದೆ.

**ಮರುವಶವಾದ ಭೂಮಿಯಲ್ಲಿ 'ನೆಡುತೋಪು'ಗಳ ನಿರ್ಮಾಣ:**

ಕೇವಲ ಒತ್ತುವರಿ ತೆರವು ಮಾಡುವುದಷ್ಟೇ ಅಲ್ಲದೆ, ಭೂಗಳ್ಳರು ಮತ್ತೆ ಅತಿಕ್ರಮಣ ಮಾಡದಂತೆ ತಡೆಯಲು ಇಲಾಖೆ ಮಾಸ್ಟರ್ ಪ್ಲಾನ್ ರೂಪಿಸಿದೆ. ಮರುವಶಪಡಿಸಿಕೊಂಡ ಜಾಗಕ್ಕೆ ತಕ್ಷಣವೇ ಕಾಂಪೌಂಡ್ ನಿರ್ಮಿಸಿ, ಸಾವಿರಾರು ಸಸಿಗಳನ್ನು ನೆಡುವ ಮೂಲಕ ಆ ಪ್ರದೇಶಗಳನ್ನು 'ನೆಡುತೋಪು' (Urban Forests) ಗಳನ್ನಾಗಿ ಪರಿವರ್ತಿಸಲಾಗುವುದು. ಇದು ನಗರದ ಜನತೆಗೆ ಶುದ್ಧ ಗಾಳಿ ನೀಡುವ ನೈಸರ್ಗಿಕ ಕೇಂದ್ರಗಳಾಗಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

ಬೆಂಗಳೂರಿಗೆ ಸಿಗಲಿದೆ ಮತ್ತೊಂದು 'ಲಾಲ್ಬಾಗ್':

ನಗರದ ಹಸಿರು ವಿಸ್ತೀರ್ಣ ಹೆಚ್ಚಿಸುವ ಸಲುವಾಗಿ ಬೆಂಗಳೂರು ಉತ್ತರ ತಾಲೂಕಿನ ಮಾದಪ್ಪನಹಳ್ಳಿಯ 153 ಎಕರೆ ಪ್ರದೇಶದಲ್ಲಿ 'ವಿಶ್ವಗುರು ಬಸವಣ್ಣನವರ ಬೃಹತ್ ಜೈವಿಕ ಉದ್ಯಾನವನ' ತಲೆ ಎತ್ತಲಿದೆ ಎಂದು ಹೇಳಿದರು.

ಹವಾಮಾನ ಬದಲಾವಣೆ ತಡೆಗೆ ಜಿಲ್ಲಾ ಮಟ್ಟದ ಕ್ರಿಯಾ ಯೋಜನೆ ಪರಿಸರ ಮಾಲಿನ್ಯ ನಿಯಂತ್ರಣಕ್ಕಾಗಿ ಇಒಕಖಖ ಸಂಸ್ಥೆ ರೂಪಿಸಿರುವ 'ಕರ್ನಾಟಕ ರಾಜ್ಯ ಕ್ರಿಯಾ ಯೋಜನೆ'ಗೆ ಸರ್ಕಾರದ ಒಪ್ಪಿಗೆ ಸಿಕ್ಕಿದೆ. ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಹವಾಮಾನ ವೈಪರೀತ್ಯ ಎದುರಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತರಬೇತಿ ಮತ್ತು ಅನುಷ್ಠಾನ ಪ್ರಕ್ರಿಯೆಗಳು ಶೀಘ್ರವೇ ಆರಂಭವಾಗಲಿವೆ. ವೃಕ್ಷೋ ರಕ್ಷತಿಃ ರಕ್ಷಿತಃ" ಎಂಬ ಧ್ಯೇಯದೊಂದಿಗೆ ಬೆಂಗಳೂರಿನ ಕೆರೆಗಳ ಪುನರ್ನಿರ್ಮಾಣ ಮತ್ತು ನಗರದ ಹಸಿರು ವಲಯವನ್ನು ವಿಸ್ತರಿಸುವುದೇ ನಮ್ಮ ಅಂತಿಮ ಗುರಿಯಾಗಿದೆ ಎಂದು ಅವರು ತಿಳಿಸಿದರು.

ಇಂದಿನ ಕಾರ್ಯಾಗಾರದಲ್ಲಿ ವಿಷಯ ತಜ್ಞರು ಮಂಡಿಸುವ ವಿಷಯ ಹಾಗೂ ಮಾಧ್ಯಮ ಪ್ರತಿನಿಧಿಗಳು ಚರ್ಚಿಸುವ ವಿಷಯದ ಕುರಿತು ವಿಸ್ತೃತ ವರದಿ ಸಲ್ಲಿಸಿದಲ್ಲಿ ಅರಣ್ಯ ಇಲಾಖೆ ವತಿಯಿಂದ ಕ್ರಮವಹಿಸಲಾಗುವುದು ಎಂದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಶ್ರೀಮತಿ ಆಯೇಷಾ ಖಾನಂ ಅವರು ಗಣ್ಯರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಬದಲಾಗುತ್ತಿರುವ ಬೆಂಗಳೂರು ನಗರದಲ್ಲಾಗುತ್ತಿರುವ ಪರಿಸರ ಬದಲಾವಣೆ ಹಾಗೂ ಹೆಚ್ಚುತ್ತಿರುವ ಶಾಖದ ಕುರಿತು ವರದಿ ಮಾಡಿ ಸರ್ಕಾರದ ಗಮನ ಸೆಳೆಯುವ ಕರ್ತವ್ಯ ನಿರ್ವಹಿಸುವ ಮಾಧ್ಯಮಗಳು ಹಾಗೂ ಸರ್ಕಾರದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಜವಬ್ಧಾರಿಯಿಂದ ಇಂತಹ ವಿನೂತನ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಸ್ತುತ ದಶಕದಲ್ಲಿ ತಾಪಮಾನ ಏರಿಕೆ ವಿಷಯು ಜಾಗತಿಕವಾಗಿ ಆಳುವ ಸರ್ಕಾರಗಳ ಗಮನ ಸೆಳೆಯುತ್ತಿದೆ ಹಾಗೂ ಜನ-ಸಾಮಾನ್ಯರ ಸಾವು-ನೋವುಗಳಿಗೆ ಕಾರಣವಾಗುತ್ತಿದೆ. ಇಂತಹ ಗಂಭೀರ ವಿಷಯವನ್ನು ಕುರಿತು ಸರ್ಕಾರದ ಗಮನ ಸೆಳೆಯುವುದರ ಜೊತೆಗೆ ಜನ-ಸಾಮಾನ್ಯರು ಪಾಲಿಸಬೇಕಾದ ಜಾಗೃತಿ ಅಂಶಗಳ ಕುರಿತು ಇಂದಿನ ಈ ಕಾರ್ಯಗಾರ ಬೆಳಕು ಚೆಲ್ಲಿಲಿದೆ.

ಮಾಧ್ಯಮ ಅಕಾಡೆಮಿಯು ಈ ಕಾರ್ಯಾಗಾರದಲ್ಲಿ ಚರ್ಚಿಸುವ ಹಾಗೂ ಮಂಡಿಸಿದ ವಿಷಯಗಳ ಕುರಿತು ಸರ್ಕಾರದ ಮುಂದಿನ ಕ್ರಮಕ್ಕಾಗಿ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದ ನಿರ್ದೇಶಕರಾದ ಎಂ ಎಸ್ ದಿವಾಕರ್ ಅವರು ಮಾತನಾಡಿ ಪರಿಸರ ವೈಪರೀತ್ಯಗಳು ಸಾಮಾನ್ಯವಾಗಿ ಸಂಭವಿಸುತ್ತಲೇ ಇರುತ್ತವೆ. ಪ್ರಸ್ತುತ ತಂತ್ರಜ್ಞಾನ ಹಾಗೂ ಮಾಧ್ಯಮ ಸಂವಹನದ ಪರಿಣಾಮ ಹೆಚ್ಚು ಸುದ್ದಿಯಾಗುತ್ತಿದೆ. ಇತಿಹಾಸ ತೆಗೆದು ನೋಡಿದಾಗ ಹಲವಾರು ದಾಖಲೆಗಳನ್ನು ಗಮನಿಸಬಹುದಾಗಿದೆ ಎಂದರು.

ಅಧ್ಯಯನಗಳ ಪ್ರಕಾರ ಈ ವರ್ಷ ಮಳೆ ಕಡಿಮೆಯಾಗುವುದು ಎಂದು ವರದಿ ಹೇಳುತ್ತದೆ, ಬಿಸಿಲಿನ ತಾಪಮಾನ ಹೆಚ್ಚಾಗಿರುವುದು ತಿಳಿದು ಬಂದಿರುವ ವಿಷಯವಾಗಿರುವುದರಿಂದ ಈಗಾಗಲೇ ಬೆಂಗಳೂರಿನ ಐಐಎಸ್ಸಿ ಸಹಭಾಗಿತ್ವದಲ್ಲಿ ಈ ಬಿಸಿಲು ಸಂದರ್ಭದಲ್ಲಿ ಜನ-ಸಾಮಾನ್ಯರು ಕೈಗೊಳ್ಳಬೇಕಾದ ಕ್ರಮಗಳ ಕುರಿತು ವರದಿ ತಯಾರಿಸಿ ಜನ ಜಾಗೃತಿ ಮೂಡಿಸಲಾಗುತ್ತಿದೆ.

1980 ರಲ್ಲಿಯೇ ಕರ್ನಾಟಕ ಪರಿಸರ ಬದಲಾವಣೆಗಳ ಕುರಿತು ಅಧ್ಯಯನಕ್ಕಾಗಿ ಡಿ ಎಮ್ ಸಿ ಸ್ಥಾಪಿಸುವ ಮೂಲಕ ಭಾರತದಲ್ಲಿಯೇ ಈ ವಿಷಯದಲ್ಲಿ ಮುಂಚೂಣಿಯಲ್ಲಿದೆ. ನಮ್ಮ ರಾಜ್ಯದಲ್ಲಿ ಹೋಬಳಿಗೊಂದರಂತೆ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ವ್ಯವಸ್ಥೆ ಭಾರತದ ಯಾವುದೇ ರಾಜ್ಯಗಳಲ್ಲಿ ಇಲ್ಲ.

ಬಿಸಿಲಿನ ಕುರಿತು ವರದಿ ಮಾಡುವ ಪತ್ರಕರ್ತರಿಗೆ ಬಿಸಲು ಪೂರ್ಣ ದಿನ ಒಂದೇ ರೀತಿ ಇರುವುದಿಲ್ಲ, ಯಾವುದೋ ಒಂದು ಸಮಯದಲ್ಲಿ ತನ್ನ ಗರಿಷ್ಠ ತಾಪಮಾನ ದಾಖಲಿಸಿ ಕಡಿಮೆಯಾಗುತ್ತದೆ. ಅದೇ ರೀತಿ ಆ ಬಿಸಿಲಿನ ತಾಪಮಾನಕ್ಕೆ ಬಿಸಿಯಾಗುವ ಪರಿಸರ ನಂತರ ಸಂಜೆಯಾದಂತೆ ತಣ್ಣಗಾಗುವಲ್ಲಿ ತೆಗೆದುಕೊಳ್ಳುವ ಸಮಯ ಪ್ರದೇಶದಿಂದ ಪ್ರದೇಶಕ್ಕೆ ವ್ಯತ್ಯಾಸ ಹೊಂದಿರುತ್ತದೆ. ಕೆಲವು ಕಡೆ ಸಮಯ ತೆಗೆದುಕೊಂಡರೆ ಮತ್ತೊಂದು ಕಡೆ ಕಡಿಮೆ ಸಮಯ ತೆಗೆದುಕೊಳ್ಳುತ್ತದೆ ಅದರ ಆಧಾರದ ಮೇಲೆ ಒಟ್ಟಾರೆ ತಾಪಮಾನವನ್ನು ಅಳೆಯಬೇಕಾಗುತ್ತದೆ ಎಂದು ತಿಳಿಸಿದರು.

ಉದ್ಘಾಟನಾ ಸಮಾರಂಭದ ನಂತರ ಆರಂಭವಾದ ಕಾರ್ಯಾಗಾರದಲ್ಲಿ ಅಸರ್ ಸೋಶಿಯಲ್ ಇಂಪ್ಯಾಕ್ಟ್ ಅಡ್ವೈಸರ್ಸ್ ಸಂಸ್ಥೆಯ ಮುಖ್ಯ ಸಂವಹನಾಧಿಕಾರಿ ಬ್ರಿಕೇಶ್ ಸಿಂಗ್ ಅವರು ಭಾಗವಹಿಸಿ, 'ಕಾರ್ಯಾಗಾರದ ಉದ್ದೇಶ ಮತ್ತು ಪ್ರಸ್ತುತತೆ' ವಿಷಯದ ಕುರಿತು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಕಾರ್ಯಾಗಾರವು ಪ್ರಸ್ತುತ ಸಾಮಾಜಿಕ ಸನ್ನಿವೇಶದಲ್ಲಿ ಈ ಚರ್ಚೆಯ ಅಗತ್ಯತೆ ಮತ್ತು ಮುಂದಿನ ಗುರಿಗಳ ಬಗ್ಗೆ ಬೆಳಕು ಚೆಲ್ಲಲಿದೆ ಎಂದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕರಾದ ಎಂ.ಎಸ್. ದಿವಾಕರ್ ಅವರು ರಾಜ್ಯದಲ್ಲಿ ಶಾಖದ ಅಲೆಗಳ ಮುನ್ಸೂಚನೆ ಮತ್ತು ನಿರ್ವಹಣೆಯ ಬಗ್ಗೆ ದತ್ತಾಂಶ ಸಹಿತ ವಿವರಿಸಿದರು. ಐಐಹೆಸ್ ನ ಹಿರಿಯ ಸಹವರ್ತಿ ಎಸ್. ಸ್ವಾತಿ ಅವರು ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಉಷ್ಣಾಂಶದ ಕಾರಣಗಳ ಬೆಂಗಳೂರಿನ ಸ್ಥಿತಿಗತಿ ಬಗ್ಗೆ ಬೆಳಕು ಚೆಲ್ಲಿದರು. ಹೀಟ್ ವಾಚ್ ಸಂಸ್ಥೆಯ ಸ್ಥಾಪಕ ಆಪೇಕ್ಷಿತಾ ವರ್ಷನಯ್ ಅವರು ತೀವ್ರ ಉಷ್ಣಾಂಶದಿಂದ ಬಾಧಿತರಾಗುವ ದುರ್ಬಲ ವರ್ಗಗಳ ಬಗ್ಗೆ ಕಳಕಳಿ ವ್ಯಕ್ತಪಡಿಸಿದರು.

ಬಿಬಿಎಂಪಿಯ ಹವಾಮಾನ ಕ್ರಿಯಾ ಕೋಶದ ಕಾರ್ಯನಿರ್ವಾಹಕ ಇಂಜಿನಿಯರ್ ಶ್ರೀಮತಿ ನಿತ್ಯಾ ಜೆ ಅವರು ಏರುತ್ತಿರುವ ತಾಪಮಾನವನ್ನು ಎದುರಿಸಲು ನಗರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಬಿಸಿಲಿನ ತಾಪದಿಂದ ತತ್ತರಿಸುತ್ತಿರುವ ಹೊರಾಂಗಣ ಕಾರ್ಮಿಕರೊಂದಿಗೆ 'ಸೊಕ್ರಟಸ್' ಸಂಸ್ಥೆಯ ಭಾರ್ಗವಿ ನಾಗೇಂದ್ರ ಅವರ ನೇತೃತ್ವದಲ್ಲಿ ವಿಶೇಷ ಸಂವಾದ ನಡೆಯಿತು. ಪ್ರತಿಯೊಂದು ಗೋಷ್ಠಿಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದ್ದು ವಿಶೇಷವಾಗಿತ್ತು.

